ಸಂಪುಟ: 11 ಸಂಚಿಕೆ: 148 ಪುಟ: 4+2 ಬೆಲೆ : 3.00 ಬುಧವಾರ ಜುಲೈ 15, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶಲೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 11 Issue : 148 Pages : 4+2 Rate : 3.00 Wednesday July 15, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22




ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

### ಕುಡಿಯುವ ನೀರಿನ ಸಂರಕ್ಷಣೆಗೆ ಕಟ್ಟುನಿಟ್ಟಿನ ಆದೇಶ | ನಿಯಮ ಉಲ್ಲಂಘಿಸಿದರೆ ಕಾನೂನು ಕ್ರಮ


## ನೀರಿನ ದುರುಪಯೋಗಕ್ಕೆ ಸರ್ಕಾರದ ಕಡಿವಾಣ

**ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದಲ್ಲಿ ಮಳೆಯ ಕೊರತೆಯಿಂದ ಕುಡಿಯುವ ನೀರಿನ ಸಮಸ್ಯೆ ಎದುರಾಗುತ್ತಿರುವ ಹಿನ್ನೆಲೆಯಲ್ಲಿ, ಕೆರೆ, ಜಲಾಶಯ ಹಾಗೂ ಡ್ಯಾಮ್‌ಗಳಲ್ಲಿ ಸಂಗ್ರಹವಾಗಿರುವ ನೀರನ್ನು ಕುಡಿಯುವ ನೀರು ಹಾಗೂ ಜನಜೀವನಕ್ಕೆ ಅಗತ್ಯವಾದ ಬಳಕೆಗೆ ಮಾತ್ರ ಮೀಸಲಿಡಬೇಕು ಎಂದು ಜಲಸಂಪನ್ಮೂಲ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಬೆಂಗಳೂರುದಿಂದ ವಿಡಿಯೋ ಸಂವಾದದ ಮೂಲಕ ಜಿಲ್ಲಾಧಿಕಾರಿಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಕುಡಿಯುವ ನೀರಿನ ಲಭ್ಯತೆ, ಜಲಾಶಯಗಳ ನೀರಿನ ಮಟ್ಟ ಮತ್ತು ಮುನ್ನೆಚ್ಚರಿಕೆ ಕ್ರಮಗಳ ಕುರಿತು ಪರಿಶೀಲನಾ ಸಭೆ ನಡೆಸಿ ಅವರು ಮಾತನಾಡಿದರು.

ರಾಜ್ಯ ಸರ್ಕಾರದ ಮೊದಲ ಆದ್ಯತೆ ಸಾರ್ವಜನಿಕರಿಗೆ ಯಾವುದೇ ರೀತಿಯ



ಕುಡಿಯುವ ನೀರಿನ ತೊಂದರೆ ಉಂಟಾಗದಂತೆ ನೋಡಿಕೊಳ್ಳುವುದಾಗಿದೆ. ಈ ಹಿನ್ನೆಲೆಯಲ್ಲಿ ಕೆರೆ, ಡ್ಯಾಮ್ ಹಾಗೂ ಜಲಾಶಯಗಳಲ್ಲಿ ಸಂಗ್ರಹವಾಗಿರುವ ನೀರನ್ನು ಜವಾಬ್ದಾರಿಯಿಂದ ನಿರ್ವಹಿಸಬೇಕು.

ಕೃಷಿ, ಲಿಫ್ಟ್ ಇರಿಗೇಶನ್, ವಾಹನ ತೊಳೆಯುವುದು, ಕೈಗಾರಿಕಾ ಬಳಕೆ ಸೇರಿದಂತೆ ಅನಿವಾರ್ಯವಲ್ಲದ ಉದ್ದೇಶಗಳಿಗೆ ನೀರು ಬಳಸುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ಸ್ಪಷ್ಟಪಡಿಸಿದರು.

ಕೆರೆ ಹಾಗೂ ಜಲಾಶಯಗಳಿಂದ ಅನಧಿಕೃತವಾಗಿ ನೀರು ಎತ್ತುತ್ತಿರುವ ಪಂಪ್‌ಸೆಟ್‌ಗಳನ್ನು ತಕ್ಷಣ ತೆರವುಗೊಳಿಸಬೇಕು. ನಿಯಮ ಉಲ್ಲಂಘಿಸುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ಜಿಲ್ಲಾಧಿಕಾರಿಗಳು ಯಾವುದೇ ಕಾರಣಕ್ಕೂ ಲಿಫ್ಟ್ ಇರಿಗೇಶನ್‌ಗೆ ಅನುಮತಿ ನೀಡಬಾರದು ಎಂದು ಸೂಚಿಸಿದರು.

ಮುಂದಿನ ದಿನಗಳಲ್ಲಿ ಉತ್ತಮ ಮಳೆಯಾದಲ್ಲಿ ಪರಿಸ್ಥಿತಿಯನ್ನು ಮರುಪರಿಶೀಲಿಸಿ ಸರ್ಕಾರ ಅಗತ್ಯ ನಿರ್ಧಾರ ಕೈಗೊಳ್ಳಲಿದೆ.

ಅಲ್ಲಿಯವರೆಗೆ ಜಾರಿಯಲ್ಲಿರುವ ಎಲ್ಲ ನಿರ್ಬಂಧಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಗದಗ ಜಿಲ್ಲಾಡಳಿತ ಭವನದಿಂದ ವಿಡಿಯೋ ಸಂವಾದದಲ್ಲಿ ಪಾಲ್ಗೊಂಡ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, ಸರ್ಕಾರದ ಎಲ್ಲ ನಿರ್ದೇಶನಗಳನ್ನು ಜಿಲ್ಲೆಯಲ್ಲಿ ಕಟ್ಟುನಿಟ್ಟಾಗಿ ಜಾರಿಗೊಳಿಸಲಾಗುವುದು.

ಕೆರೆ ಹಾಗೂ ಜಲಾಶಯಗಳ ನೀರಿನ ಮಟ್ಟವನ್ನು ನಿರಂತರವಾಗಿ ಪರಿಶೀಲಿಸಿ, ಅನಧಿಕೃತ ನೀರು ಬಳಕೆಯನ್ನು ತಡೆಯಲಾಗುವುದು. ಬೇಸಿಗೆಯ ವರೆಗೆ ಜಿಲ್ಲೆಯ ಜನರಿಗೆ ಕುಡಿಯುವ ನೀರಿನ ಕೊರತೆ ಉಂಟಾಗದಂತೆ ಎಲ್ಲ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಜಲಸಂಪನ್ಮೂಲ, ಸಣ್ಣ ನೀರಾವರಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ, ಕಂದಾಯ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

> **ಕುಡಿಯುವ ನೀರು ಸಾರ್ವಜನಿಕರ ಹಕ್ಕು. ಯಾವುದೇ ಕಾರಣಕ್ಕೂ ಕೆರೆ, ಡ್ಯಾಮ್ ಹಾಗೂ ಜಲಾಶಯಗಳ ನೀರನ್ನು ಅನಿವಾರ್ಯವಲ್ಲದ ಉದ್ದೇಶಗಳಿಗೆ ಬಳಸಲು ಅವಕಾಶ ನೀಡಬಾರದು. ನಿಯಮ ಉಲ್ಲಂಘಿಸಿದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು.**
> 
> - **ಗೌರವ್ ಗುಪ್ತಾ,** ಅಪರ ಮುಖ್ಯ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ

## ಬರ ಘೋಷಿಸಿ, ಪ್ರತಿ ಎಕರೆಗೆ ₹30 ಸಾವಿರ ಪರಿಹಾರ ನೀಡಿ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಜಿಲ್ಲೆಯಾದ್ಯಂತ ಮಳೆಯಿಲ್ಲದೆ ಮುಂಗಾರು ಬೆಳೆಗಳು ಸಂಪೂರ್ಣ ಹಾಳಾಗಿದ್ದು, ಸರ್ಕಾರ ಕೂಡಲೇ ಗದಗ ಜಿಲ್ಲೆಯನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿ ರೈತರಿಗೆ ಪರಿಹಾರಧನ ಬಿಡುಗಡೆ ಮಾಡಬೇಕು ಎಂದು ಅಖಿಲ ಕರ್ನಾಟಕ ರಾಜ್ಯ ಕಿಸಾನ್ ಜಾಗೃತಿ ಸಂಘದ ಜಿಲ್ಲಾಧ್ಯಕ್ಷ ಯಲ್ಲಪ್ಪ ಕರಮಡಿ ಹಾಗೂ ಜಿಲ್ಲಾ ಗೌರವಾಧ್ಯಕ್ಷ ಟಾಕಪ್ಪ ಸಾತಪೂತೆ ಆಗ್ರಹಿಸಿದರು. ಪಟ್ಟಣದ ಪತ್ರಿಕಾ ಕಾರ್ಯಾಲಯದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆರಂಭದಲ್ಲಿ ಮಳೆಯಾದ ಹಿನ್ನೆಲೆಯಲ್ಲಿ ರೈತರು ಸಾಲ ಮಾಡಿ ಬಿತ್ತನೆ ಮಾಡಿದ್ದರು. ಆದರೆ ಬಳಿಕ ಒಂದೂವರೆ ತಿಂಗಳಿನಿಂದ ಮಳೆ ಕೈಕೊಟ್ಟ ಪರಿಣಾಮ ಬೆಳೆಗಳು ಒಣಗಿ ನಿಂತಿದ್ದು, ರೈತರು ಭಾರೀ ನಷ್ಟ ಅನುಭವಿಸುವಂತಾಗಿದೆ ಎಂದು ಹೇಳಿದರು.

ಹೆಸರು, ಗೋವಿನಜೋಳ, ಶೇಂಗಾ, ಈರುಳ್ಳಿ, ಜೋಳ, ಎಳ್ಳು ಹಾಗೂ ಉದ್ದು ಸೇರಿದಂತೆ ಪ್ರಮುಖ ಬೆಳೆಗಳು ಸಂಪೂರ್ಣ ಹಾನಿಗೊಳಗಾಗಿವೆ. ಆದ್ದರಿಂದ ತಕ್ಷಣ ಬರ ಘೋಷಿಸಿ ಪರಿಹಾರ ಕಾಮಗಾರಿಗಳನ್ನು ಆರಂಭಿಸಬೇಕು ಎಂದು ಒತ್ತಾಯಿಸಿದರು.

ಪ್ರತಿ ಬೆಳೆಗೂ ಪರಿಹಾರ ಘೋಷಿಸಬೇಕು. ಕೆಲವೇ ಬೆಳೆಗಳಿಗೆ ಪರಿಹಾರ ನೀಡುವುದರಿಂದ ರೈತರ ಸಂಕಷ್ಟ ನಿವಾರಣೆಯಾಗುವುದಿಲ್ಲ ಎಂದು ಹೇಳಿದರು.

ಬೆಳೆ ಸಮೀಕ್ಷೆ ನಡೆಸುತ್ತಿರುವ ಪಿಆರ್‌ಒಗಳು ಸಮರ್ಪಕವಾಗಿ ಹೊಲಗಳಿಗೆ ಭೇಟಿ ನೀಡದೆ ಮನಬಂದಂತೆ ಮಾಹಿತಿ ದಾಖಲಿಸುತ್ತಿದ್ದಾರೆ ಎಂದು ಆರೋಪಿಸಿದ ಅವರು, ತಹಶೀಲ್ದಾರರು ಈ ಕುರಿತು ನಿಗಾ ವಹಿಸಿ ನಿರ್ಲಕ್ಷ್ಯ ತೋರಿದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಕಳೆದ ವರ್ಷದ ಬೆಳೆ ವಿಮೆ ಹಣ ಹಾಗೂ ಮೆಣಸಿನಕಾಯಿ ಬೆಳೆ ಮಧ್ಯಂತರ ಪರಿಹಾರ ಇನ್ನೂ ರೈತರಿಗೆ ದೊರೆತಿಲ್ಲ. ಬ್ಯಾಂಕುಗಳು ಸಾಲ ಮರುಪಾವತಿಗೆ ರೈತರ ಮೇಲೆ ಒತ್ತಡ ಹೇರುವುದನ್ನು ನಿಲ್ಲಿಸಬೇಕು. ಒನ್ ಟೈಮ್ ಸೆಟ್ಲ್‌ಮೆಂಟ್ (ಒಟಿಎಸ್) ಮಾಡಿಕೊಂಡ ರೈತರಿಗೆ ಅದೇ ಬ್ಯಾಂಕುಗಳಲ್ಲಿ ಮತ್ತೆ ಸಾಲ ಸೌಲಭ್ಯ ಕಲ್ಪಿಸಬೇಕು. ಜೊತೆಗೆ ರೈತರ ಜಮೀನುಗಳಿಗೆ ಸಂಪರ್ಕ ರಸ್ತೆಗಳನ್ನು ಅಭಿವೃದ್ಧಿಪಡಿಸಬೇಕು ಎಂದು ಒತ್ತಾಯಿಸಿದರು.

ಈ ವರ್ಷದ ಬೆಳೆ ಹಾನಿಯನ್ನು ಪರಿಗಣಿಸಿ ಪ್ರತಿ ಎಕರೆಗೆ ₹30 ಸಾವಿರ ಪರಿಹಾರ ನೀಡುವಂತೆ ಆಗ್ರಹಿಸಿದರು.

ಬಳಿಕ ಸಂಘದ ಪದಾಧಿಕಾರಿಗಳು ತಹಶೀಲ್ದಾರ ಧನಂಜಯ ಎಂ. ಅವರ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು. ಸುದ್ದಿಗೋಷ್ಠಿಯಲ್ಲಿ ಜಿಪಂ ಮಾಜಿ ಅಧ್ಯಕ್ಷ ಎಸ್.ಪಿ. ಬಳಿಗಾರ, ರೈತ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸೋಮಶೇಖರ ಹಿರೇಮಠ, ಶಿರಹಟ್ಟಿ ತಾಲೂಕು ಅಧ್ಯಕ್ಷ ವೀರನಗೌಡ ಪಾಟೀಲ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಎಸ್‌ಐಆರ್ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧಿಕಾರಿಗಳಿಗೆ ಡಿಸಿ ತಾಕೀತು

## ಅರ್ಹ ಮತದಾರರು ಪಟ್ಟಿಯಿಂದ ಕೈತಪ್ಪದಿರಲಿ

**ವಿಜಯಸಾಕ್ಷಿ ಸುದ್ದಿ, ಗದಗ**

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕಾರ್ಯವನ್ನು ಅತ್ಯಂತ ಪಾರದರ್ಶಕ ಹಾಗೂ ನಿಖರವಾಗಿ ಪೂರ್ಣಗೊಳಿಸಬೇಕು. ಯಾವುದೇ ಅರ್ಹ ಮತದಾರರ ಹೆಸರು ಪಟ್ಟಿಯಿಂದ ಹೊರಗುಳಿಯದಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಹಾಗೂ ಚುನಾವಣಾ ಅಧಿಕಾರಿಗಳೊಂದಿಗೆ ನಡೆದ ಎಸ್‌ಐಆರ್ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ 967 ಮತಗಟ್ಟೆಗಳಲ್ಲೂ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಕಡ್ಡಾಯವಾಗಿ ಲಭ್ಯವಿದ್ದು, ಮನೆಮನೆಗೆ ತೆರಳಿ ಮತದಾರರ ಮಾಹಿತಿ ಸಂಗ್ರಹಣೆ ಹಾಗೂ ನಮೂನೆಗಳ ಭರ್ತಿ ಕಾರ್ಯವನ್ನು ಚುರುಕುಗೊಳಿಸಬೇಕು. ಕರ್ತವ್ಯ ಲೋಪ ಎಸಗುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಮತದಾರರ ಅನುಕೂಲಕ್ಕಾಗಿ ಎಲ್ಲಾ ಮತಗಟ್ಟೆಗಳಲ್ಲಿ ಸಹಾಯ ಕೇಂದ್ರಗಳನ್ನು ತೆರೆಯಲಾಗಿದೆ. ಫಾರ್ಮ್ ಭರ್ತಿಗೆ ನೆರವಾಗಲು ಸ್ವಸಹಾಯ ಸಂಘಗಳ ಸದಸ್ಯರು ಹಾಗೂ ಸ್ವಯಂಸೇವಕರನ್ನು ನಿಯೋಜಿಸಲಾಗಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಮದುವೆಯ ನಂತರ ಹೆಸರು ಬದಲಾದ



ಮಹಿಳೆಯರು, ವಿಳಾಸ ಬದಲಾವಣೆ ಮಾಡಿಕೊಂಡವರು ಹಾಗೂ ಮರಣ ಹೊಂದಿದವರ ಹೆಸರುಗಳನ್ನು ಪಟ್ಟಿಯಿಂದ ಕೈಬಿಡುವ ಪ್ರಕ್ರಿಯೆಯನ್ನು ಸ್ಥಳೀಯ ಮಟ್ಟದಲ್ಲಿ ಸಮಗ್ರ ಪರಿಶೀಲನೆ ನಡೆಸಿದ ಬಳಿಕವೇ ಕೈಗೊಳ್ಳಬೇಕು ಎಂದು ಸೂಚಿಸಿದರು.

ಮತದಾರರ ಪಟ್ಟಿಗೆ ಸಂಬಂಧಿಸಿದ ಯಾವುದೇ ಗೊಂದಲ ಅಥವಾ ಲೋಪದೋಷಗಳಿದ್ದಲ್ಲಿ ಸಾರ್ವಜನಿಕರು ತಹಸೀಲ್ದಾರ್ ಅಥವಾ ಸಹಾಯಕ ಮತದಾರರ ನೋಂದಣಾಧಿಕಾರಿಗಳನ್ನು ಸಂಪರ್ಕಿಸಿ ತಿದ್ದುಪಡಿ ಮಾಡಿಸಿಕೊಳ್ಳಬಹುದು ಎಂದು ತಿಳಿಸಿದರು.

ಜುಲೈ 20ರೊಳಗೆ ಡಿಜಿಟೈಸೇಶನ್ ಕಾರ್ಯ ಪೂರ್ಣಗೊಳಿಸುವ ಗುರಿ ಹೊಂದಲಾಗಿದ್ದು,

> **ಮತದಾರರ ಪಟ್ಟಿ ಪರಿಷ್ಕರಣೆ ಪ್ರಜಾಪ್ರಭುತ್ವದ ಅತ್ಯಂತ ಮಹತ್ವದ ಪ್ರಕ್ರಿಯೆ. ಯಾವುದೇ ಅರ್ಹ ಮತದಾರರ ಹೆಸರು ಕೈತಪ್ಪದಂತೆ ಅಧಿಕಾರಿಗಳು ಹಾಗೂ ರಾಜಕೀಯ ಪಕ್ಷಗಳು ಸಮನ್ವಯದಿಂದ ಕೆಲಸ ಮಾಡಬೇಕು.**
> 
> - **ಸಿ.ಎನ್. ಶ್ರೀಧರ್,** ಜಿಲ್ಲಾಧಿಕಾರಿ, ಗದಗ

ಬಿಎಲ್‌ಒ ಹಾಗೂ ರಾಜಕೀಯ ಪಕ್ಷಗಳ ಬೂತ್ ಮಟ್ಟದ ಏಜೆಂಟರು (ಬಿಎಲ್‌ಎ) ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಮೃತರು ಹಾಗೂ ಶಾಶ್ವತ ವಾಗಿ ಸ್ಥಳಾಂತರಗೊಂಡವರ ಹೆಸರುಗಳನ್ನು ನಿಯಮಾನುಸಾರ ಪರಿಶೀಲಿಸಿ ಮಾತ್ರ ಕೈಬಿಡಬೇಕು. ಯಾವುದೇ ಅರ್ಹ ಮತದಾರರ ಹೆಸರು ತಪ್ಪದೇ ಸೇರ್ಪಡೆಯಾಗುವಂತೆ ಹಾಗೂ ಅನರ್ಹರ ಹೆಸರು ಸೇರ್ಪಡೆಯಾಗದಂತೆ ಎಚ್ಚರ ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಮುಂದಿನ ದಿನಗಳಲ್ಲಿ 18 ವರ್ಷ ಪೂರೈಸಲಿರುವ ಯುವ ಮತದಾರರನ್ನು ಫಾರ್ಮ್-6 ಮೂಲಕ ಈಗಿನಿಂದಲೇ ನೋಂದಾಯಿಸಲು ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಉಪವಿಭಾಗಾಧಿಕಾರಿ ಗಂಗಪ್ಪ ಎಂ., ಚುನಾವಣಾ ತಹಸೀಲ್ದಾರ್ ಸಂತೋಷ ಹಿರೇಮಠ, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

## ಎಸ್‌ಐಆರ್: 9.02 ಲಕ್ಷ ಎನ್ಯುಮರೇಷನ್ ಫಾರ್ಮ್ ವಿತರಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕಾರ್ಯ ಚುರುಕುಗೊಂಡಿದ್ದು, ಜುಲೈ 13ರವರೆಗೆ 9,02,411 ಎನ್ಯುಮರೇಷನ್ ಫಾರ್ಮ್‌ಗಳನ್ನು ಮತದಾರರಿಗೆ ವಿತರಿಸಲಾಗಿದೆ ಎಂದು ಜಿಲ್ಲಾಡಳಿತ ಪ್ರಕಟಣೆಯಲ್ಲಿ ತಿಳಿಸಿದೆ. ಜಿಲ್ಲೆಯಲ್ಲಿ ಒಟ್ಟು 9,02,947 ಮತದಾರರು ಹಾಗೂ 967 ಮತಗಟ್ಟೆಗಳು ಇದ್ದು, ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆ-ಮನೆಗೆ ಭೇಟಿ ನೀಡಿ ಎನ್ಯುಮರೇಷನ್ ಫಾರ್ಮ್ ವಿತರಿಸುವ ಕಾರ್ಯ ಮುಂದುವರಿಸಿದ್ದಾರೆ.

ಈವರೆಗೆ 3,25,001 ಎನ್ಯುಮರೇಷನ್ ಫಾರ್ಮ್‌ಗಳ ಡಿಜಿಟಲೀಕರಣ ಪೂರ್ಣಗೊಂಡಿದ್ದು, ಉಳಿದ ನಮೂನೆಗಳ ಡಿಜಿಟಲೀಕರಣ ಕಾರ್ಯವೂ ಪ್ರಗತಿಯಲ್ಲಿದೆ.

ಜುಲೈ 29ರವರೆಗೆ ಬಿಎಲ್‌ಒಗಳು ಮನೆ-ಮನೆಗೆ ಭೇಟಿ ನೀಡಿ ಎನ್ಯುಮರೇಷನ್ ಫಾರ್ಮ್ ವಿತರಿಸಲಿದ್ದು, ಮತದಾರರು ಅಗತ್ಯ ಮಾಹಿತಿ ನೀಡಿ ಸಹಕರಿಸುವಂತೆ ಜಿಲ್ಲಾಡಳಿತ

### ಗದಗ-ಸೊಲ್ಲಾಪುರ ಡಬ್ಲಿಂಗ್ ಉದ್ಘಾಟನೆ ಗದಗದಲ್ಲೇ ನಡೆಸಲು ಸಂಸದ ಈ. ತುಕಾರಾಮರಿಗೆ ಮನವಿ

## ಗದಗ-ಹರಪನಹಳ್ಳಿ ರೈಲು ಮಾರ್ಗಕ್ಕೆ ಶೀಘ್ರ ಚಾಲನೆಗೆ ಒತ್ತಾಯ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗಹರಪನಹಳ್ಳಿ ನೂತನ ರೈಲು ಮಾರ್ಗ ಕಾಮಗಾರಿಯನ್ನು ಶೀಘ್ರ ಆರಂಭಿಸಬೇಕು ಹಾಗೂ ಗದಗಸೊಲ್ಲಾಪುರ ಡಬ್ಲಿಂಗ್ ರೈಲು ಮಾರ್ಗದ ಉದ್ಘಾಟನಾ ಸಮಾರಂಭವನ್ನು ಗದಗದಲ್ಲೇ ಆಯೋಜಿಸಬೇಕು ಎಂದು ಆಗ್ರಹಿಸಿ ಗದಗ ಜಿಲ್ಲಾ ವಿಕಾಸ ವೇದಿಕೆಯ ಪದಾಧಿಕಾರಿಗಳು ಬಳ್ಳಾರಿ ಲೋಕಸಭಾ ಕ್ಷೇತ್ರದ ಸಂಸದ ಈ. ತುಕಾರಾಮ ಅವರಿಗೆ ಮನವಿ ಸಲ್ಲಿಸಿದರು.

ಗದಗ-ಹರಪನಹಳ್ಳಿ ರೈಲು ಮಾರ್ಗದ ಸರ್ವೇಗಾಗಿ ಈಗಾಗಲೇ ₹9 ಲಕ್ಷ ಮಂಜೂರಾಗಿದ್ದು, ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ ಹಾಗೂ ಕೇಂದ್ರ ಸಚಿವ ವಿ. ಸೋಮಣ್ಣ ಅವರ ಗಮನಕ್ಕೆ ತಂದು ಕಾಮಗಾರಿಯನ್ನು ತ್ವರಿತಗೊಳಿಸುವಂತೆ ಮನವಿ ಮಾಡಿದರು.

ಗದಗ, ಅಡವಿಸೋಮಾಪುರ, ಡಂಬಳ, ಹೂವಿನಹಡಗಲಿ, ಹರಪನಹಳ್ಳಿ ಮಾರ್ಗವಾಗಿ ಸುಮಾರು 93 ಕಿ.ಮೀ. ಉದ್ದದ ಈ ಹೊಸ ರೈಲು ಮಾರ್ಗ ನಿರ್ಮಾಣವಾದರೆ ವಿಜಯಪುರ, ಬಾಗಲಕೋಟೆ, ಗದಗ ಹಾಗೂ ವಿಜಯನಗರ ಜಿಲ್ಲೆಗಳ ಜನರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ತಿಳಿಸಿದರು.

ಈ ಮಾರ್ಗ ನಿರ್ಮಾಣದಿಂದ ಮೈಸೂರು, ಬೆಂಗಳೂರು, ತಿರುಪತಿ, ಹೈದರಾಬಾದ್ ಸೇರಿದಂತೆ ಪ್ರಮುಖ ನಗರಗಳಿಗೆ ಹೊಸ ರೈಲುಗಳ ಸಂಚಾರಕ್ಕೂ ಅವಕಾಶ ದೊರೆಯಲಿದ್ದು, ವ್ಯಾಪಾರ, ಶಿಕ್ಷಣ ಹಾಗೂ ಕೃಷಿ ಕ್ಷೇತ್ರಕ್ಕೂ ಉತ್ತೇಜನ ಸಿಗಲಿದೆ ಎಂದು ಅಭಿಪ್ರಾಯಪಟ್ಟರು.

ಗದಗಸೊಲ್ಲಾಪುರ ಡಬ್ಲಿಂಗ್ ಕಾಮಗಾರಿ ಪೂರ್ಣಗೊಂಡಿರುವ ಹಿನ್ನೆಲೆಯಲ್ಲಿ, ಗದಗದಿಂದ



ಸೊಲ್ಲಾಪುರ ಮಾರ್ಗವಾಗಿ ಹೊಸ ರೈಲುಗಳನ್ನು ಆರಂಭಿಸುವುದರ ಜೊತೆಗೆ ಉದ್ಘಾಟನಾ ಕಾರ್ಯಕ್ರಮವನ್ನು ಗದಗದಲ್ಲೇ ನಡೆಸಬೇಕು ಎಂದು ವಿಕಾಸ ವೇದಿಕೆ ಒತ್ತಾಯಿಸಿತು.

ಈ ಸಂದರ್ಭದಲ್ಲಿ ಮಾತನಾಡಿದ ಸಂಸದ ಈ. ತುಕಾರಾಮ, ಈ ಎಲ್ಲ ಬೇಡಿಕೆಗಳನ್ನು ಕೇಂದ್ರ ರೈಲ್ವೆ ಸಚಿವರು ಹಾಗೂ ರಾಜ್ಯ ಸರ್ಕಾರದ ಗಮನಕ್ಕೆ ತಂದು, ಗದಗಹರಪನಹಳ್ಳಿ ರೈಲು ಮಾರ್ಗ ಕಾಮಗಾರಿ ಶೀಘ್ರ ಆರಂಭವಾಗಲು ಮತ್ತು ಡಬ್ಲಿಂಗ್ ಮಾರ್ಗದ ಉದ್ಘಾಟನೆ ಗದಗದಲ್ಲೇ ನಡೆಯಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಭರವಸೆ ನೀಡಿದರು.

> **ಗದಗಹರಪನಹಳ್ಳಿ ರೈಲು ಮಾರ್ಗ ನಿರ್ಮಾಣವಾದರೆ ಉತ್ತರ ಕರ್ನಾಟಕದ ಜನರ ಬಹುಕಾಲದ ಕನಸು ನನಸಾಗಲಿದೆ. ಕೇಂದ್ರ ಸರ್ಕಾರದ ಗಮನಕ್ಕೆ ತಂದು ಕಾಮಗಾರಿ ಶೀಘ್ರ ಆರಂಭಿಸಲು ಪ್ರಯತ್ನಿಸುತ್ತೇವೆ.**
> 
> - **ಈ. ತುಕಾರಾಮ,** ಬಳ್ಳಾರಿ ಲೋಕಸಭಾ ಸದಸ್ಯ

ಗದಗ ಜಿಲ್ಲಾ ವಿಕಾಸ ವೇದಿಕೆ ಅಧ್ಯಕ್ಷ ವಿಶ್ವನಾಥ ಖಾನಾಪೂರ, ಜಗದೀಶ ಕಂಗೂರಿ, ವೀರಭದ್ರಪ್ಪ ಕಬ್ಬಿಣದ, ವೆಂಕಟೇಶ ಕಬಾಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಸಂಜೀವಿನಿ ಯೋಜನೆ ಜಿಲ್ಲೆಗೆ ಮಾದರಿಯಾಗಲಿ | ವಾರದ ಸಂತೆ ಪುನರಾರಂಭಕ್ಕೂ ಇಒ ಸೂಚನೆ

## ಅಕ್ಕಾ ಕಫೆಯಿಂದ ಮಹಿಳಾ ಸ್ವಾವಲಂಬನೆಗೆ ಹೊಸ ದಾರಿ

**ವಿಜಯಸಾಕ್ಷಿ ಸುದ್ದಿ, ನರಗುಂದ**

ಸಂಜೀವಿನಿ ಯೋಜನೆಯ ಎಲ್ಲ ಕಾರ್ಯಕ್ರಮಗಳನ್ನು ಜಿಲ್ಲೆಯಲ್ಲಿಯೇ ಮೊದಲಾಗಿ ಹಾಗೂ ಮಾದರಿಯಾಗಿ ನರಗುಂದ ತಾಲೂಕಿನಲ್ಲಿ ಅನುಷ್ಠಾನಗೊಳಿಸಬೇಕು. ಗ್ರಾಮೀಣ ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆ ಯೋಜನೆಯನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಬೇಕು ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಶ್ರೀಧರ್ ಚಿನಗುಂಡಿ ಸೂಚಿಸಿದರು.

ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಸಂಜೀವಿನಿ ಯೋಜನೆಯ ಮುಖ್ಯ ಪುಸ್ತಕ ಬರಹಗಾರರ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು.

ಗ್ರಾಮೀಣ ಜನರನ್ನು ಸ್ವಾವಲಂಬಿಗಳನ್ನಾಗಿಸುವ ಉದ್ದೇಶದಿಂದ ಜಾರಿಯಲ್ಲಿರುವ ಸಂಜೀವಿನಿ ಯೋಜನೆಯನ್ನು ಸಿಬ್ಬಂದಿ ಪ್ರಾಮಾಣಿಕತೆ, ಬದ್ಧತೆ ಹಾಗೂ ಪಾರದರ್ಶಕತೆಯಿಂದ ಅನುಷ್ಠಾನಗೊಳಿಸಬೇಕು ಎಂದು ಹೇಳಿದರು.

ತಾಲೂಕಿನಲ್ಲಿ ಶೀಘ್ರವೇ ಟಿಅಕ್ಕಾ ಕಫೆಟಿ ಆರಂಭಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿದ ಅವರು, ಉಪಹಾರ, ಊಟ ಸೇರಿದಂತೆ ಸಿರಿಧಾನ್ಯ ಹಾಗೂ ನೈಸರ್ಗಿಕ ಆಹಾರ ಪದಾರ್ಥಗಳನ್ನು ಸಾರ್ವಜನಿಕರಿಗೆ ತಲುಪಿಸುವ ವ್ಯವಸ್ಥೆ ರೂಪಿಸಬೇಕು ಎಂದರು. ಸರ್ಕಾರಿ ವಿದ್ಯಾರ್ಥಿನಿಲಯಗಳು ಹಾಗೂ ವಿವಿಧ ಸರ್ಕಾರಿ ಕಾರ್ಯಕ್ರಮಗಳಿಗೆ ಅಕ್ಕಾ ಕಫೆಯ ಮೂಲಕ ಆಹಾರ ಪೂರೈಕೆ ಮಾಡಿದರೆ ಸ್ವಸಹಾಯ ಸಂಘಗಳ ಮಹಿಳೆಯರಿಗೆ ಉತ್ತಮ ಆದಾಯದ ಮೂಲ ಸೃಷ್ಟಿಯಾಗಲಿದೆ ಎಂದು ತಿಳಿಸಿದರು.

ಪ್ರತಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಾರದ ಸಂತೆಗಳನ್ನು ಪುನರಾರಂಭಿಸುವಂತೆ ಸೂಚಿಸಿದ



ಅವರು, ರೈತರು ಬೆಳೆದ ತರಕಾರಿಗಳನ್ನು ಸ್ವಸಹಾಯ ಸಂಘಗಳ ಮಹಿಳೆಯರು ಖರೀದಿಸಿ ಮಾರಾಟ ಮಾಡುವ ವ್ಯವಸ್ಥೆ ಜಾರಿಯಾದರೆ ರೈತರು, ಮಹಿಳೆಯರು ಹಾಗೂ ಗ್ರಾಹಕರು ಎಲ್ಲರೂ ಇದರ ಪ್ರಯೋಜನ ಪಡೆಯಲಿದ್ದಾರೆ ಎಂದರು.

ಯೋಜನೆಯಡಿ ಬಿಡುಗಡೆಯಾಗುವ ಅನುದಾನವನ್ನು ಪಾರದರ್ಶಕವಾಗಿ ಬಳಕೆ ಮಾಡಬೇಕು. ಅರ್ಹ ಫಲಾನುಭವಿಗಳಿಗೆ ಮಾತ್ರ ಸಾಲ ಸೌಲಭ್ಯ ದೊರೆಯುವಂತೆ ನೋಡಿಕೊಳ್ಳಬೇಕು. ಸಾಲ ಮರುಪಾವತಿ, ಲೆಕ್ಕಪತ್ರ ನಿರ್ವಹಣೆ ಹಾಗೂ ದಾಖಲೆಗಳನ್ನು ನಿಯಮಿತವಾಗಿ ನವೀಕರಿಸುವಂತೆ ಸಿಬ್ಬಂದಿಗೆ ಸೂಚಿಸಿದರು.

ವಿಬಿಜಿ ರಾಮ್-ಜಿ ಯೋಜನೆಯ ಯಶಸ್ವಿ ಅನುಷ್ಠಾನದಲ್ಲಿಯೂ ಸಂಜೀವಿನಿ ಸಿಬ್ಬಂದಿಯ ಪಾತ್ರ ಮಹತ್ವದ್ದಾಗಿದೆ. ನರೇಗಾ ಯೋಜನೆಗೆ ನೀಡಿದ ಸಹಕಾರದಂತೆಯೇ ಈ ಯೋಜನೆಗೂ ಸಂಪೂರ್ಣ ಸಹಕಾರ ನೀಡಬೇಕು. ಜೊತೆಗೆ ಪ್ರತಿ ವಾರ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಪ್ರಗತಿ ಪರಿಶೀಲನಾ ಸಭೆ ನಡೆಸಿ ಪಂಚಾಯಿತಿ ಹಾಗೂ ಸಂಜೀವಿನಿ ಸಿಬ್ಬಂದಿ ನಡುವೆ ಸಮನ್ವಯ ಹೆಚ್ಚಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ವ್ಯವಸ್ಥಾಪಕ (ಕೃಷಿ ಜೀವನೋಪಾಯ) ಮಡ್ಡೇಶ ಮಲೀಮಾರ, ತಾಲೂಕು ಕಾರ್ಯಕ್ರಮ ವ್ಯವಸ್ಥಾಪಕ ಮೋಹನಕೃಷ್ಣ, ಸಂಜೀವಿನಿ ಯೋಜನೆಯ ಸಿಬ್ಬಂದಿ ಹಾಗೂ ತಾಲೂಕಿನ 13 ಗ್ರಾಮ ಪಂಚಾಯಿತಿಗಳ ಮುಖ್ಯ ಪುಸ್ತಕ ಬರಹಗಾರರು ಉಪಸ್ಥಿತರಿದ್ದರು.

> **ಸಂಜೀವಿನಿ ಯೋಜನೆಯನ್ನು ಜಿಲ್ಲೆಯಲ್ಲಿಯೇ ಮಾದರಿಯಾಗಿ ರೂಪಿಸುವ ಗುರಿ ನಮ್ಮದು. ಮಹಿಳೆಯರ ಆರ್ಥಿಕ ಸ್ವಾವಲಂಬನೆಗೆ ಅಕ್ಕಾ ಕಫೆ ಹಾಗೂ ವಾರದ ಸಂತೆಗಳಂತಹ ಕಾರ್ಯಕ್ರಮಗಳು ಹೆಚ್ಚು ನೆರವಾಗಲಿವೆ.**
> 
> - **ಶ್ರೀಧರ್ ಚಿನಗುಂಡಿ,** ಕಾರ್ಯನಿರ್ವಾಹಕ ಅಧಿಕಾರಿ, ತಾಲೂಕು ಪಂಚಾಯಿತಿ ನರಗುಂದ

### ಧರ್ಮಸ್ಥಳ ಜನಮಂಗಳ ಯೋಜನೆಯಡಿ ವೀಲ್ ಚೇರ್, ವಾಟರ್ ಬೆಡ್ ಸೇರಿದಂತೆ ನೆರವು ವಿತರಣೆ

# ನೊಂದವರ ಬದುಕಿಗೆ ಆಸರೆಯಾದ ಜನಮಂಗಳ ಯೋಜನೆ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜನಮಂಗಳ ಕಾರ್ಯಕ್ರಮವು ಗ್ರಾಮೀಣ ಪ್ರದೇಶದ ವಿಕಲಚೇತನರು, ನಿರ್ಗತಿಕರು ಹಾಗೂ ಹಿರಿಯ ನಾಗರಿಕರ ಬದುಕಿಗೆ ಆಸರೆಯಾಗಿರುವ ಮಹತ್ವದ ಸಾಮಾಜಿಕ ಭದ್ರತಾ ಯೋಜನೆಯಾಗಿದೆ ಎಂದು ಯೋಜನೆಯ ಯೋಜನಾಧಿಕಾರಿ ಪುನೀತ್ ಓಲೇಕಾರ ಹೇಳಿದರು.

ಪಟ್ಟಣದಲ್ಲಿ ನಡೆದ ಜನಮಂಗಳ ಕಾರ್ಯಕ್ರಮದಲ್ಲಿ ಪೂಜ್ಯ ಡಾ. ಡಿ. ವೀರೇಂದ್ರ ಹೆಗ್ಗಡೆ ಅವರಿಂದ ಮಂಜೂರಾದ ವಿವಿಧ ನೆರವು ಸಾಮಗ್ರಿಗಳನ್ನು ಫಲಾನುಭವಿಗಳಿಗೆ ವಿತರಿಸಿ ಅವರು ಮಾತನಾಡಿದರು.

ಈ ಸಂದರ್ಭದಲ್ಲಿ ಆಸಾರ್ ಓಣಿ ಹಾಗೂ ಹಳ್ಳದಕೇರಿ ವ್ಯಾಪ್ತಿಯ ವಯೋಸಹಜ ಸಮಸ್ಯೆಯಿಂದ ಬಳಲುತ್ತಿರುವ ಜೈತುನಬಿ ರೋಷನ್ ಖಾನ್ ಅವರಿಗೆ ವಾಟರ್ ಬೆಡ್, ಹುಟ್ಟಿನಿಂದಲೇ ನಡೆಯಲು ಅಸಾಧ್ಯವಾಗಿರುವ

**ವಿಕಲಚೇತನರು ಹಾಗೂ ಹಿರಿಯ ನಾಗರಿಕರು ಸ್ವಾವಲಂಬಿ ಜೀವನ ನಡೆಸಲು ಅಗತ್ಯ ನೆರವು, ಕೃತಕ ಸಾಧನಗಳು ಮತ್ತು ತರಬೇತಿಗಳನ್ನು ಜನಮಂಗಳ ಯೋಜನೆಯಡಿ ಉಚಿತವಾಗಿ ಒದಗಿಸಲಾಗುತ್ತಿದೆ.**
**- ಪುನೀತ್ ಓಲೇಕಾರ,** ಯೋಜನಾಧಿಕಾರಿ

ವಿನೋದ ಶೇಖನವರ ಅವರಿಗೆ ಔಟ್‌ಡೋರ್ ವೀಲ್‌ಚೇರ್, ನಡೆದಾಡಲು ಅಸಾಧ್ಯವಾಗಿರುವ ಶರಪುನೀಸಾ ಸಂಶಿ ಅವರಿಗೆ ಕಮೋಡ್ ವೀಲ್ ಚೇರ್ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಜನಜಾಗೃತಿ ವೇದಿಕೆಯ ಸದಸ್ಯ ರಾಜೀವ ಕುಂಬಿ, ಅಮರೀಶ ತೆಂಬದಮನಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಸಂಘದ ಮೇಲ್ವಿಚಾರಕ ನಿಂಗಪ್ಪ ಪಾಟೀಲ, ಒಕ್ಕೂಟದ ಪದಾಧಿಕಾರಿಗಳು, ಸಂಘದ ಸದಸ್ಯರು, ವಲಯದ ಮೇಲ್ವಿಚಾರಕರು ಹಾಗೂ ಸೇವಾ ಪ್ರತಿನಿಧಿಗಳು ಉಪಸ್ಥಿತರಿದ್ದರು.

### ನಾಯಕತ್ವ, ಜವಾಬ್ದಾರಿ ಮತ್ತು ಪ್ರಜಾಪ್ರಭುತ್ವದ ಮೌಲ್ಯ ಬೆಳೆಸುವ ಶಾಲಾ ಸಂಸತ್: ಡಾ. ಅನಂತ ಎಸ್. ಕಾರ್ಕಳ

# ಭವಿಷ್ಯದ ನಾಯಕರಿಗೆ ಶಾಲಾ ಸಂಸತ್ತೇ ಮೊದಲ ಪಾಠಶಾಲೆ

**ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ವಿದ್ಯಾರ್ಥಿಗಳಲ್ಲಿ ನಾಯಕತ್ವದ ಗುಣ, ಜವಾಬ್ದಾರಿಯ ಪ್ರಜ್ಞೆ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಬೆಳೆಸುವಲ್ಲಿ ಶಾಲಾ ಸಂಸತ್ತು ಮಹತ್ವದ ಪಾತ್ರ ವಹಿಸುತ್ತದೆ ಎಂದು ಹಿರಿಯ ಪತ್ರಕರ್ತ ಡಾ. ಅನಂತ ಎಸ್. ಕಾರ್ಕಳ ಹೇಳಿದರು.

ಬೆಟಗೇರಿಯ ಶ್ರೀ ಎಸ್.ಎಸ್.ಕೆ. ಜಗದಂಬಾ ಆಂಗ್ಲ ಮಾಧ್ಯಮ ಶಾಲೆಯಲ್ಲಿ ನಡೆದ ಶಾಲಾ ಸಂಸತ್ ಪ್ರಮಾಣ ವಚನ ಸ್ವೀಕಾರ ಹಾಗೂ ಪ್ರಮಾಣಪತ್ರ ವಿತರಣಾ ಸಮಾರಂಭದಲ್ಲಿ ಮಾತನಾಡಿದ ಅವರು, ಶಾಲಾ ಸಂಸತ್ತು ಮಕ್ಕಳಿಂದ, ಮಕ್ಕಳಿಗಾಗಿ ಮತ್ತು ಮಕ್ಕಳೇ ನಡೆಸುವ ವ್ಯವಸ್ಥೆಯಾಗಿದ್ದು, ವಿದ್ಯಾರ್ಥಿಗಳಿಗೆ ತಮ್ಮ ಅಭಿಪ್ರಾಯಗಳನ್ನು




ಮುಕ್ತವಾಗಿ ವ್ಯಕ್ತಪಡಿಸುವ ವೇದಿಕೆಯಾಗಿದೆ ಎಂದು ಹೇಳಿದರು.

ವಿದ್ಯಾರ್ಥಿಗಳ ಹಕ್ಕುಗಳ ರಕ್ಷಣೆಗೆ ಧ್ವನಿಯಾಗುವ ಜೊತೆಗೆ ಸಂವಹನ, ಭಾಷಣ ಕೌಶಲ್ಯ ಹಾಗೂ ಆತ್ಮವಿಶ್ವಾಸವನ್ನು ಬೆಳೆಸುವಲ್ಲಿ ಶಾಲಾ ಸಂಸತ್ತಿನ ಪಾತ್ರ ಮಹತ್ವದ್ದಾಗಿದೆ ಎಂದು ತಿಳಿಸಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಗದಗ ಜಿಲ್ಲಾ ಪತ್ರಕರ್ತರ ಸಂಘದ ಕಾರ್ಯಕಾರಿಣಿ ಸದಸ್ಯ ಆನಂದಯ್ಯ ವಿರಕ್ತಮಠ ಮಾತನಾಡಿ, ವಿದ್ಯಾರ್ಥಿಗಳು ಪ್ರಧಾನ ಮಂತ್ರಿ, ಶಿಕ್ಷಣ ಸಚಿವ, ಕ್ರೀಡಾ ಸಚಿವ ಸೇರಿದಂತೆ ವಿವಿಧ ಹುದ್ದೆಗಳ ಜವಾಬ್ದಾರಿ ನಿರ್ವಹಿಸುವುದರಿಂದ ಆಡಳಿತಾತ್ಮಕ ಕೌಶಲ್ಯ ಮತ್ತು ನಾಯಕತ್ವದ ಸಾಮರ್ಥ್ಯ ವೃದ್ಧಿಯಾಗುತ್ತದೆ ಎಂದರು.

ಶಾಲಾ ಶಿಸ್ತು, ಸ್ವಚ್ಛತೆ ಹಾಗೂ ವಿವಿಧ ಚಟುವಟಿಕೆಗಳ ನಿರ್ವಹಣೆಯಲ್ಲಿ ವಿದ್ಯಾರ್ಥಿಗಳ ಪಾಲ್ಗೊಳ್ಳುವಿಕೆಯಿಂದ ಜವಾಬ್ದಾರಿಯುತ ವ್ಯಕ್ತಿತ್ವ ರೂಪುಗೊಳ್ಳುತ್ತದೆ ಎಂದು ಎಸ್.ಎಸ್.ಕೆ. ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಜಿ.ವಿ. ಬಸವಾ ಅಭಿಪ್ರಾಯಪಟ್ಟರು.

ಸಮಾರಂಭದಲ್ಲಿ ಆಂಗ್ಲ ಮಾಧ್ಯಮ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಲೋಕನಾಥ ಕಬಾಡಿ, ಶಿಕ್ಷಣ ಸಂಸ್ಥೆಯ ಉಪಾಧ್ಯಕ್ಷ ದತ್ತುಸಾ ಪವಾರ, ಎಸ್.ಎಸ್.ಕೆ. ತರುಣ ಸಂಘದ ಅಧ್ಯಕ್ಷ ಶ್ರೀರಾಮ ಹಬೀಬ, ಶ್ರೀ ಜಗದಂಬಾ ಮಹಿಳಾ ಮಂಡಳದ ಅಧ್ಯಕ್ಷೆ ರೂಪಾ ಮಿಸ್ಕಿನ್ ಹಾಗೂ ಮುಖ್ಯ ಶಿಕ್ಷಕ ಸಿ.ಎಸ್. ಹವಳದ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಶಾಲಾ ಸಂಸತ್ ಸ್ಪೀಕರ್ ಆಗಿ ಕು. ಜಯಶ್ರೀ ವಿ. ಗೋಟೂರ, ಅಧ್ಯಕ್ಷೆಯಾಗಿ ಕು. ಶ್ರೇಯಾ ಟಿ. ಭಾಂಡಗೆ ಸೇರಿದಂತೆ ನೂತನ ಪದಾಧಿಕಾರಿಗಳು ಪ್ರಮಾಣ ವಚನ ಸ್ವೀಕರಿಸಿದರು. ವಿದ್ಯಾರ್ಥಿನಿ ಐಶಾ ಓಡೆಕರ್ ಸ್ವಾಗತಿಸಿದರು. ಶಾಲೆಯ ಪ್ರಾಂಶುಪಾಲೆ ಎಸ್.ಡಿ. ಬೆನಕಲ್ ವಂದಿಸಿದರು.

# ಜು.17ರಂದು ಕೆಎಲ್‌ಇ ಜೆ.ಟಿ. ಕಾಲೇಜಿನಲ್ಲಿ ಬೃಹತ್ ಆರೋಗ್ಯ ಶಿಬಿರ

**ವಿಜಯಸಾಕ್ಷಿ ಸುದ್ದಿ, ಗದಗ**

ಶಿಕ್ಷಣ, ಆರೋಗ್ಯ ಹಾಗೂ ಸಮಾಜಸೇವೆಯಲ್ಲಿ ಶತಮಾನಕ್ಕೂ ಅಧಿಕ ಸೇವೆ ಸಲ್ಲಿಸಿರುವ ಕೆಎಲ್‌ಇ ಸಂಸ್ಥೆ, ಜನಸಾಮಾನ್ಯರಿಗೆ ಗುಣಮಟ್ಟದ ಆರೋಗ್ಯ ಸೇವೆ ತಲುಪಿಸುವ ಉದ್ದೇಶದಿಂದ ಜುಲೈ 17ರಂದು ಗದಗದಲ್ಲಿ ಬೃಹತ್ ಉಚಿತ ಆರೋಗ್ಯ ತಪಾಸಣೆ ಹಾಗೂ ಶಸ್ತ್ರಚಿಕಿತ್ಸಾ ಶಿಬಿರವನ್ನು ಆಯೋಜಿಸಿದೆ.

ಬೆಳಗಾವಿಯ ಕೆಎಲ್‌ಇ ಡಾ. ಪ್ರಭಾಕರ ಕೋರೆ ಆಸ್ಪತ್ರೆ ಮತ್ತು ವೈದ್ಯಕೀಯ ಸಂಶೋಧನಾ ಕೇಂದ್ರದ ಸಹಯೋಗದಲ್ಲಿ ಜುಲೈ 17ರಂದು ಬೆಳಿಗ್ಗೆ 9ರಿಂದ ಮಧ್ಯಾಹ್ನ 2 ಗಂಟೆಯವರೆಗೆ ನಗರದ ಕೆಎಲ್‌ಇ ಜೆ.ಟಿ. ಕಾಲೇಜು ಆವರಣದಲ್ಲಿ ಶಿಬಿರ ನಡೆಯಲಿದೆ.

ಶಿಬಿರದಲ್ಲಿ ಹೃದಯ, ನರರೋಗ, ಮೂತ್ರರೋಗ, ಗ್ಯಾಸ್ಟ್ರೋ, ಶ್ವಾಸಕೋಶ, ಕಿವಿ-ಮೂಗು-ಗಂಟಲು, ಕಣ್ಣಿನ ರೋಗ, ಎಲುಬು ಮತ್ತು ಕೀಲು, ಬೆನ್ನುಹುರಿ, ಸ್ತ್ರೀರೋಗ, ಮಕ್ಕಳ ಆರೋಗ್ಯ, ಚರ್ಮರೋಗ, ದಂತ ಚಿಕಿತ್ಸೆ, ಕ್ಯಾನ್ಸರ್, ಪ್ಲಾಸ್ಟಿಕ್ ಸರ್ಜರಿ, ಯುರಾಲಜಿ, ರಕ್ತನಾಳಗಳ ಶಸ್ತ್ರಚಿಕಿತ್ಸೆ ಸೇರಿದಂತೆ ವಿವಿಧ ವಿಭಾಗಗಳ ತಜ್ಞ ವೈದ್ಯರು ಆರೋಗ್ಯ ತಪಾಸಣೆ ನಡೆಸಲಿದ್ದಾರೆ.

ಅಗತ್ಯವಿರುವ ರೋಗಿಗಳಿಗೆ ಪ್ರಯೋಗಾಲಯ ಪರೀಕ್ಷೆ, ತಜ್ಞರ ಸಲಹೆ, ಔಷಧೋಪಚಾರ ಹಾಗೂ ಮುಂದಿನ ಚಿಕಿತ್ಸೆಗೆ ಮಾರ್ಗದರ್ಶನ ನೀಡಲಾಗುತ್ತದೆ. ಶಸ್ತ್ರಚಿಕಿತ್ಸೆ ಅಗತ್ಯವಿರುವ ಅರ್ಹರನ್ನು ಆಯ್ಕೆ ಮಾಡಿ ಆಯುಷ್ಮಾನ್ ಭಾರತ್, ಆರೋಗ್ಯ ಕರ್ನಾಟಕ ಹಾಗೂ ಇತರ ಸರ್ಕಾರಿ ಯೋಜನೆಗಳಡಿ ಉಚಿತ ಅಥವಾ ರಿಯಾಯಿತಿ ದರದಲ್ಲಿ ಶಸ್ತ್ರಚಿಕಿತ್ಸೆ ಮಾಡುವ ವ್ಯವಸ್ಥೆಯೂ ಕಲ್ಪಿಸಲಾಗಿದೆ.

ಶಿಬಿರದಲ್ಲಿ ಅಂಗಾಂಗ ದಾನದ ಕುರಿತು ವಿಶೇಷ ಜಾಗೃತಿ ಕೇಂದ್ರ ಸ್ಥಾಪಿಸಲಾಗಿದ್ದು, ಮರಣಾನಂತರ ಅಂಗಾಂಗ ದಾನದ ಮಹತ್ವದ ಕುರಿತು ಮಾಹಿತಿ ನೀಡುವ ಜೊತೆಗೆ ನೋಂದಣಿಗೂ ಅವಕಾಶ ಕಲ್ಪಿಸಲಾಗಿದೆ.

ಗ್ರಾಮೀಣ ಪ್ರದೇಶದ ರೈತರು, ಕಾರ್ಮಿಕರು, ಹಿರಿಯ ನಾಗರಿಕರು, ಮಹಿಳೆಯರು, ಮಕ್ಕಳು ಹಾಗೂ ದೀರ್ಘಕಾಲದ ಕಾಯಿಲೆಯಿಂದ ಬಳಲುತ್ತಿರುವವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಶಿಬಿರದ ಸದುಪಯೋಗ ಪಡೆಯುವಂತೆ ಆಯೋಜಕರು ಮನವಿ ಮಾಡಿದ್ದಾರೆ.

# ವಿಭಾಗೀಯ ಪರೀಕ್ಷೆ: ಜು.17ರಿಂದ 19ರವರೆಗೆ ನಿಷೇಧಾಜ್ಞೆ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಲೋಕಸೇವಾ ಆಯೋಗ (ಕೆಪಿಎಸ್‌ಸಿ) ನಡೆಸಲಿರುವ 2026ನೇ ಸಾಲಿನ ಪ್ರಥಮ ಅಧಿವೇಶನದ ಇಲಾಖಾ ಪರೀಕ್ಷೆ ಹಿನ್ನೆಲೆಯಲ್ಲಿ, ಗದಗ ನಗರದ ಸಿ.ಡಿ.ಓ ಜೈನ್ ಇಂಗ್ಲಿಷ್ ಮೀಡಿಯಂ ಶಾಲೆ ಪರೀಕ್ಷಾ ಕೇಂದ್ರದ ಸುತ್ತಲಿನ 300 ಮೀಟರ್ ವ್ಯಾಪ್ತಿಯಲ್ಲಿ ಜುಲೈ 17ರಿಂದ 19ರವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.

ಪರೀಕ್ಷೆ ವೇಳೆ ನಕಲು, ಸೋಗು ಪರೀಕ್ಷಾರ್ಥಿಗಳ ಹಾಜರಾತಿ ಸೇರಿದಂತೆ ಯಾವುದೇ ರೀತಿಯ ಅಕ್ರಮಗಳನ್ನು ತಡೆಗಟ್ಟುವ ಹಾಗೂ ಶಾಂತಿ-ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಈ ಆದೇಶ ಹೊರಡಿಸಲಾಗಿದೆ. ಜುಲೈ 17ರಿಂದ 19ರವರೆಗೆ ಪ್ರತಿದಿನ ಬೆಳಿಗ್ಗೆ 8ರಿಂದ ಸಂಜೆ 7 ಗಂಟೆಯವರೆಗೆ ಪರೀಕ್ಷಾರ್ಥಿಗಳು, ಪರೀಕ್ಷಾ ಸಿಬ್ಬಂದಿ ಹಾಗೂ ಅಧಿಕಾರಿಗಳನ್ನು ಹೊರತುಪಡಿಸಿ ಇತರರ ಪ್ರವೇಶವನ್ನು ನಿರ್ಬಂಧಿಸಲಾಗಿದೆ. ಐದು ಮಂದಿಗಿಂತ ಹೆಚ್ಚು ಜನರು ಗುಂಪು ಸೇರುವುದು ಕೂಡ ನಿಷೇಧಿಸಲಾಗಿದೆ. ಪರೀಕ್ಷಾ ಕೇಂದ್ರದ ವ್ಯಾಪ್ತಿಯಲ್ಲಿರುವ ಝೆರಾಕ್ಸ್ ಅಂಗಡಿ, ಬುಕ್ ಸ್ಟಾಲ್ ಹಾಗೂ ಫೋಟೋಕಾಪಿ ಕೇಂದ್ರಗಳನ್ನು ತಾತ್ಕಾಲಿಕವಾಗಿ ಬಂದ್ ಮಾಡಲು ಆದೇಶಿಸಲಾಗಿದೆ. ಪರೀಕ್ಷಾ ಕೇಂದ್ರದೊಳಗೆ ಮೊಬೈಲ್ ಫೋನ್ ಹಾಗೂ ಇತರೆ ಸಂಪರ್ಕ ಸಾಧನಗಳನ್ನು ತರುವುದಕ್ಕೂ ನಿಷೇಧ ಹೇರಲಾಗಿದೆ. ಪರೀಕ್ಷಾ ದಿನಗಳಲ್ಲಿ ವಿದ್ಯಾರ್ಥಿಗಳು ಆಗಮಿಸುವ ಹಾಗೂ ಹೊರಹೋಗುವ ಸಮಯದಲ್ಲಿ ಮಾತ್ರ ಮಾಧ್ಯಮ ಪ್ರತಿನಿಧಿಗಳಿಗೆ ಚಿತ್ರೀಕರಣಕ್ಕೆ ಅವಕಾಶವಿದ್ದು, ಪರೀಕ್ಷಾ ಕೊಠಡಿಗಳ ಒಳಗೆ ಪ್ರವೇಶ ಹಾಗೂ ಚಿತ್ರೀಕರಣವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಆದೇಶದಲ್ಲಿ ತಿಳಿಸಿದ್ದಾರೆ.

### ಗೂಗಲ್ ಐ/ಓ ಕನೆಕ್ಟ್ ಇಂಡಿಯಾದಲ್ಲಿ ಸಿಎಂ ಡಿ.ಕೆ. ಶಿವಕುಮಾರ್ ಘೋಷಣೆ | ಸ್ಟಾರ್ಟ್‌ಅಪ್‌ಗಳಿಗೆ ಎಐ ಹಬ್ ಸ್ಥಾಪನೆ

# ದೇಶದ ಮೊದಲ ಸರ್ಕಾರಿ AI ವಿಶ್ವವಿದ್ಯಾಲಯ ಕರ್ನಾಟಕದಲ್ಲೇ!



**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ದೇಶದ ಮೊದಲ ಸರ್ಕಾರಿ ಪ್ರಾಯೋಜಿತ ಕೃತಕ ಬುದ್ಧಿಮತ್ತೆ (AI) ವಿಶ್ವವಿದ್ಯಾಲಯವನ್ನು ಕರ್ನಾಟಕದಲ್ಲಿ ಸ್ಥಾಪಿಸಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಘೋಷಿಸಿದರು.

ಬೆಂಗಳೂರಿನ ಬಿಐಇಸಿ (BIEC)ನಲ್ಲಿ ನಡೆದ ಗೂಗಲ್ ಐ/ಓ ಕನೆಕ್ಟ್ ಇಂಡಿಯಾ2026 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಜಾಗತಿಕ ಮಟ್ಟದ AI ಪ್ರತಿಭೆಗಳನ್ನು ರೂಪಿಸುವುದು, ಸಂಶೋಧನೆಗೆ ಉತ್ತೇಜನ ನೀಡುವುದು ಹಾಗೂ ಶಿಕ್ಷಣ ಸಂಸ್ಥೆಗಳು, ಉದ್ಯಮ ಮತ್ತು ಸರ್ಕಾರದ ನಡುವೆ ಸಮನ್ವಯ ಬೆಳೆಸುವ ಉದ್ದೇಶದಿಂದ ಈ ವಿಶ್ವವಿದ್ಯಾಲಯ ಸ್ಥಾಪಿಸಲಾಗುತ್ತಿದೆ ಎಂದು ತಿಳಿಸಿದರು. ಇದರ ಜೊತೆಗೆ, ಸ್ಟಾರ್ಟ್‌ಅಪ್‌ಗಳು, ತಂತ್ರಜ್ಞಾನ ಕಂಪನಿಗಳು ಹಾಗೂ ಸಂಶೋಧಕರಿಗಾಗಿ ಅತ್ಯಾಧುನಿಕ AI ಹಬ್ ಸ್ಥಾಪಿಸಲಾಗುವುದು ಎಂದರು.

ಕರ್ನಾಟಕವನ್ನು AI&Native ರಾಜ್ಯವನ್ನಾಗಿ ರೂಪಿಸುವ ಗುರಿಯೊಂದಿಗೆ ಶಿಕ್ಷಣ, ಆರೋಗ್ಯ, ಕೃಷಿ, ಸಾರ್ವಜನಿಕ ಸೇವೆಗಳು ಹಾಗೂ ಸಣ್ಣ ಉದ್ಯಮಗಳಲ್ಲಿ ಕೃತಕ ಬುದ್ಧಿಮತ್ತೆ ತಂತ್ರಜ್ಞಾನವನ್ನು ವ್ಯಾಪಕವಾಗಿ ಅಳವಡಿಸಿಕೊಳ್ಳಲಾಗುವುದು ಎಂದು ಹೇಳಿದರು.

ಶಿಕ್ಷಣ ಕ್ಷೇತ್ರದಲ್ಲಿ ಶಿಕ್ಷಕರಿಗೆ AI ಆಧಾರಿತ ಬೋಧನಾ ಸಾಧನಗಳು, ಆರೋಗ್ಯ ಕ್ಷೇತ್ರದಲ್ಲಿ ಆರಂಭಿಕ ರೋಗ ಪತ್ತೆ, ಕೃಷಿಯಲ್ಲಿ ರೈತರಿಗೆ ನೈಜ ಸಮಯದ ಸಲಹೆಗಳು, ಸಾರ್ವಜನಿಕ

**ಡೆವಲಪರ್‌ಗಳು ಹೊಸದನ್ನು ನಿರ್ಮಿಸಲಿ, ಉದ್ಯಮಿಗಳು ದೊಡ್ಡ ಕನಸು ಕಾಣಲಿ, ಸಂಶೋಧಕರು ಆವಿಷ್ಕಾರ ಮುಂದುವರಿಸಲಿ, ವಿದ್ಯಾರ್ಥಿಗಳು ನಿರಂತರ ಕಲಿಯಲಿ. ನಾವೀನ್ಯತೆ, ಒಳಗೊಳ್ಳುವಿಕೆ ಮತ್ತು ವಿಶ್ವಾಸಾರ್ಹತೆಯ AI ವ್ಯವಸ್ಥೆ ನಿರ್ಮಿಸಲು ಕರ್ನಾಟಕ ಸರ್ಕಾರ ಬದ್ಧವಾಗಿದೆ.**
**- ಡಿ.ಕೆ. ಶಿವಕುಮಾರ್,** ಮುಖ್ಯಮಂತ್ರಿ

ಸೇವೆಗಳಲ್ಲಿ ವೇಗದ ಸೇವೆ ಹಾಗೂ ಸಣ್ಣ ಉದ್ಯಮಗಳಿಗೆ ಜಾಗತಿಕ ಸ್ಪರ್ಧಾತ್ಮಕತೆ ಒದಗಿಸಲು AI ಬಳಸಲಾಗುವುದು ಎಂದು ವಿವರಿಸಿದರು.

ಕಳೆದ ಎರಡು ದಶಕಗಳಿಂದ ಬೆಂಗಳೂರಿನಲ್ಲಿ ಗೂಗಲ್ ಸಂಸ್ಥೆಯ ಕೊಡುಗೆಯನ್ನು ಶ್ಲಾಘಿಸಿದ ಮುಖ್ಯಮಂತ್ರಿ, ಶಿಕ್ಷಣ, ಆರೋಗ್ಯ, ಕೃಷಿ, ಸ್ಟಾರ್ಟ್‌ಅಪ್ ಬೆಂಬಲ, AI ತರಬೇತಿ ಹಾಗೂ ಜವಾಬ್ದಾರಿಯುತ AI ಅಭಿವೃದ್ಧಿ ಸೇರಿದಂತೆ ಐದು ಪ್ರಮುಖ ಕ್ಷೇತ್ರಗಳಲ್ಲಿ ಸರ್ಕಾರದೊಂದಿಗೆ ಕೈಜೋಡಿಸುವಂತೆ ಗೂಗಲ್‌ಗೆ ಆಹ್ವಾನ ನೀಡಿದರು.

ಪ್ರಸ್ತುತ ಭಾರತದ ಸಾಫ್ಟ್‌ವೇರ್ ರಫ್ತಿನಲ್ಲಿ ಕರ್ನಾಟಕ ಸುಮಾರು ಶೇ.40ರಷ್ಟು ಕೊಡುಗೆ ನೀಡುತ್ತಿದ್ದು, ಬೆಂಗಳೂರು 17 ಸಾವಿರಕ್ಕೂ ಹೆಚ್ಚು ಸ್ಟಾರ್ಟ್‌ಅಪ್‌ಗಳು ಹಾಗೂ ಸಾವಿರಾರು ಜಾಗತಿಕ ಸಾಮರ್ಥ್ಯ ಕೇಂದ್ರಗಳಿಗೆ ನೆಲೆಯಾಗಿದೆ ಎಂದು ತಿಳಿಸಿದರು. ಡೇಟಾ ಸೆಂಟರ್‌ಗಳು, ಸುಧಾರಿತ ಕಂಪ್ಯೂಟಿಂಗ್ ಹಾಗೂ ಡಿಜಿಟಲ್ ಮೂಲಸೌಕರ್ಯವನ್ನು ಮತ್ತಷ್ಟು ಬಲಪಡಿಸಲಾಗುವುದು ಎಂದರು.

# ರಂಗೋಲಿಯ ಮೂಲಕ ಸಂಸ್ಕೃತಿ ಅರಳಿಸಿದ ಮಹಿಳಾ ಮಂಡಳ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಸರಾಫ್ ಬಜಾರ್‌ನ ಸಹಸ್ರಾರ್ಜುನ ಸಮುದಾಯ ಭವನದಲ್ಲಿ ಎಸ್‌ಎಸ್‌ಕೆ ಶ್ರೀ ಜಗದಂಬಾ ಮಹಿಳಾ ಮಂಡಳದ ವತಿಯಿಂದ ಆಯೋಜಿಸಿದ್ದ ಮೂರು ದಿನಗಳ ಸಂಸ್ಕಾರ ಭಾರತಿ ರಂಗೋಲಿ ತರಬೇತಿ ಶಿಬಿರ ಯಶಸ್ವಿಯಾಗಿ ಸಂಪನ್ನಗೊಂಡಿತು.

ಜುಲೈ 10ರಿಂದ 12ರವರೆಗೆ ಪ್ರತಿದಿನ ಸಂಜೆ 5ರಿಂದ 8 ಗಂಟೆಯವರೆಗೆ ನಡೆದ ಶಿಬಿರದಲ್ಲಿ ಸಮಾಜದ ಮಹಿಳೆಯರು ಹಾಗೂ ಮಕ್ಕಳು ಉತ್ಸಾಹದಿಂದ ಭಾಗವಹಿಸಿದರು. ಎಎಸ್‌ಎಸ್ ಕಾಲೇಜಿನ ಪ್ರಾಧ್ಯಾಪಕಿ ಶ್ರೀಮತಿ ಸುಮನ್ ಪಾಟೀಲ (ಕುಲಕರ್ಣಿ) ತರಬೇತಿ ನೀಡಿದರು.

ಮೊದಲ ದಿನ ಸಂಸ್ಕಾರ ಭಾರತಿ ರಂಗೋಲಿಯ ಮೂಲಭೂತ ಅಂಶಗಳಾದ ಚುಕ್ಕಿ, ವೃತ್ತ, ಗೋಪಾದ ಹಾಗೂ ತುರಾಯಿ ವಿನ್ಯಾಸಗಳನ್ನು ಪರಿಚಯಿಸಿದರು. ಎರಡನೇ ದಿನ ಸ್ವಸ್ತಿಕ್, ಗಣೇಶ ಹಾಗೂ ಓಂ ವಿನ್ಯಾಸಗಳನ್ನು ಬಿಡಿಸುವ ವಿಧಾನವನ್ನು ಪ್ರಾಯೋಗಿಕವಾಗಿ ತಿಳಿಸಿಕೊಟ್ಟರು. ಮೂರನೇ ದಿನ ಬಣ್ಣಗಳ ಬಳಕೆ, ಬಣ್ಣಗಳ ಸಂಯೋಜನೆ ಹಾಗೂ ಆಕರ್ಷಕ ರಂಗೋಲಿ ವಿನ್ಯಾಸಗಳ ಕುರಿತು ವಿವರವಾಗಿ ತರಬೇತಿ ನೀಡಿದರು.

ಶಿಬಿರದಲ್ಲಿ ಸುಮಾರು 45ಕ್ಕೂ ಹೆಚ್ಚು ಮಹಿಳೆಯರು ಮತ್ತು ಮಕ್ಕಳು ಭಾಗವಹಿಸಿ ಸಂಸ್ಕಾರ ಭಾರತಿ ರಂಗೋಲಿ ಕಲೆಯ ಬಗ್ಗೆ ಪ್ರಾಯೋಗಿಕ ಜ್ಞಾನ ಪಡೆದುಕೊಂಡರು.

# ಜು.20ರಿಂದ ಬೆರಳಚ್ಚು, ಶೀಘ್ರಲಿಪಿ ಪರೀಕ್ಷೆ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಳಿ, ಬೆಂಗಳೂರು ವತಿಯಿಂದ 2026ರ ಜುಲೈ ತಿಂಗಳ ವಾರ್ಷಿಕ ಬೆರಳಚ್ಚು ಹಾಗೂ ಶೀಘ್ರಲಿಪಿ ಪರೀಕ್ಷೆಗಳು ಜುಲೈ 20ರಿಂದ 28ರವರೆಗೆ ನಡೆಯಲಿವೆ.

ಗದಗ ನಗರ ಹೊರವಲಯದ ಜಿಲ್ಲಾ ಶಿಕ್ಷಕರ ತರಬೇತಿ ಕೇಂದ್ರ, ಕಳಸಾಪುರ ರಸ್ತೆಯಲ್ಲಿರುವ ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷೆಗಳು ನಡೆಯಲಿದ್ದು, ಪರೀಕ್ಷೆಗೆ ನೋಂದಾಯಿಸಿಕೊಂಡಿರುವ ವಿದ್ಯಾರ್ಥಿಗಳ ಪ್ರವೇಶ ಪತ್ರಗಳು ಸಂಬಂಧಪಟ್ಟ ವಾಣಿಜ್ಯ ವಿದ್ಯಾಲಯಗಳಿಗೆ ಕಳುಹಿಸಲಾಗಿದೆ. ವಿದ್ಯಾರ್ಥಿಗಳು ತಮ್ಮ ಪ್ರವೇಶ ಪತ್ರಗಳನ್ನು ಆಯಾ ವಿದ್ಯಾಲಯಗಳಿಂದ ಪಡೆದುಕೊಳ್ಳಬೇಕು.

ಪರೀಕ್ಷಾರ್ಥಿಗಳು ಪರೀಕ್ಷೆ ಆರಂಭವಾಗುವ ಅರ್ಧ ಗಂಟೆ ಮುಂಚಿತವಾಗಿ ಪ್ರವೇಶ ಪತ್ರದೊಂದಿಗೆ ಪರೀಕ್ಷಾ ಕೇಂದ್ರಕ್ಕೆ ಹಾಜರಾಗಬೇಕು. ತಡವಾಗಿ ಆಗಮಿಸುವ ವಿದ್ಯಾರ್ಥಿಗಳಿಗೆ ಪರೀಕ್ಷೆಗೆ ಹಾಜರಾಗಲು ಅವಕಾಶ ಇರುವುದಿಲ್ಲ ಎಂದು ನಗರದ ಶ್ರೀ ಕಲ್ಮೇಶ್ವರ ಬೆರಳಚ್ಚು ಮತ್ತು ಕಂಪ್ಯೂಟರ್ ವಿದ್ಯಾಲಯದ ಪ್ರಾಚಾರ್ಯರು ಹಾಗೂ ಗದಗ ಜಿಲ್ಲಾ ಬೆರಳಚ್ಚು ಮತ್ತು ಕಂಪ್ಯೂಟರ್ ವಿದ್ಯಾಶಾಲೆಗಳ ಸಂಘದ ಅಧ್ಯಕ್ಷ ಡಾ. ತಯಬಅಲಿ ಅ. ಹೊಂಬಳ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ಮಹಾಸರಸ್ವತಿ ಪೂಜೆ

**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಶ್ರೀ ಕಲ್ಮೇಶ್ವರ ಬೆರಳಚ್ಚು ಮತ್ತು ಕಂಪ್ಯೂಟರ್ ವಿದ್ಯಾಲಯದಲ್ಲಿ ಜುಲೈ 2026ರ ಬೆರಳಚ್ಚು ಹಾಗೂ ಶೀಘ್ರಲಿಪಿ ವಾರ್ಷಿಕ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಿಗಾಗಿ ಜುಲೈ 15ರಂದು ಬೆಳಿಗ್ಗೆ 9 ಗಂಟೆಗೆ ಮಹಾಸರಸ್ವತಿ ಪೂಜಾ ಸಮಾರಂಭವನ್ನು ಆಯೋಜಿಸಲಾಗಿದೆ.

ಎರಡು ವರ್ಷಗಳ ಸತತ ಅಭ್ಯಾಸದ ಬಳಿಕ ಪರೀಕ್ಷೆಗೆ ಹಾಜರಾಗುತ್ತಿರುವ ವಿದ್ಯಾರ್ಥಿಗಳು ಉತ್ತಮ ಅಂಕಗಳೊಂದಿಗೆ ಉನ್ನತ ದರ್ಜೆಯಲ್ಲಿ ಉತ್ತೀರ್ಣರಾಗಲಿ ಹಾಗೂ ದೇವಿಯ ಕೃಪೆ ಲಭಿಸಲಿ ಎಂಬ ಆಶಯದಿಂದ ಪೂಜೆಯನ್ನು ಹಮ್ಮಿಕೊಳ್ಳಲಾಗಿದೆ.

ಪರೀಕ್ಷೆಗೆ ಹಾಜರಾಗುವ ಎಲ್ಲ ವಿದ್ಯಾರ್ಥಿಗಳು ಪೂಜೆಯಲ್ಲಿ ಕಡ್ಡಾಯವಾಗಿ ಭಾಗವಹಿಸುವಂತೆ ವಿದ್ಯಾಲಯದ ಪ್ರಾಚಾರ್ಯ ಡಾ. ತಯಬಅಲಿ ಅ. ಹೊಂಬಳ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



**ಗದಗ: ಮಣ್ಣೆತ್ತಿನ ಅಮಾವಾಸ್ಯೆ ಅಂಗವಾಗಿ ಸಾಯಿ ನಗರದ ಭೂಷ್ಟ್ ಪ್ಲಾಟ್‌ನ ನಿವಾಸದಲ್ಲಿ ಸಂಪ್ರದಾಯಬದ್ಧ ಉಡುಗೆಯಲ್ಲಿ ಮಣ್ಣಿನ ಎತ್ತುಗಳನ್ನು ಕೈಯಲ್ಲಿ ಹಿಡಿದು ಭಕ್ತಿಭಾವದಿಂದ ಪೂಜೆ ಸಲ್ಲಿಸುತ್ತಿರುವ ಮುದ್ದು ಕಂದ ಕು. ಶ್ರೀನಿವಾಸ ಡೊಣ್ಣಿ.**

### ಆ.18ರಿಂದ 28ರವರೆಗೆ ವೈಭವದ ಜಾತ್ರೆ; 64 ಸಮಾಜಗಳ ಮುಖಂಡರ ಸಭೆಯಲ್ಲಿ ಮಹತ್ವದ ನಿರ್ಧಾರ

# 12 ವರ್ಷಗಳ ಬಳಿಕ ದ್ಯಾಮಮ್ಮ-ದುರ್ಗಮ್ಮ ಹರಿಜಾತ್ರೆ ಸಂಭ್ರಮ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ಗ್ರಾಮದೇವತೆಗಳಾದ ಶ್ರೀ ದ್ಯಾಮಮ್ಮ ಹಾಗೂ ಶ್ರೀ ದುರ್ಗಮ್ಮ ದೇವಿಯರ ಹರಿಜಾತ್ರೆಯನ್ನು 12 ವರ್ಷಗಳ ಬಳಿಕ ಈ ಬಾರಿ ಅದ್ದೂರಿಯಾಗಿ ಹಾಗೂ ಸಾಂಪ್ರದಾಯಿಕ ವೈಭವದೊಂದಿಗೆ ಆಚರಿಸಲು ಭಕ್ತರು ನಿರ್ಧರಿಸಿದ್ದಾರೆ.

ನಗರದ ರಾಚೋಟಿ ವೀರಭದ್ರೇಶ್ವರ ದೇವಸ್ಥಾನದಲ್ಲಿ ನಡೆದ ಭಕ್ತರ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದ್ದು, ಗದಗ ನಗರದ 64 ವಿವಿಧ ಸಮಾಜಗಳ ಮುಖಂಡರು ಜಾತ್ರೆಯ ಯಶಸ್ವಿ ಆಯೋಜನೆ ಕುರಿತು ಚರ್ಚಿಸಿದರು.

ಜಾತ್ರೆಯು ಆಗಸ್ಟ್ 18ರಿಂದ 28ರವರೆಗೆ ಒಕ್ಕಲಗೇರಿ ಓಣಿಯ ದ್ಯಾಮವ್ವನ ಕಟ್ಟೆ ಹಾಗೂ ಜೋಡ ಮಾರುತಿ ದೇವಸ್ಥಾನದ ಎದುರಿನ ದ್ಯಾಮಮ್ಮ ದುರ್ಗಮ್ಮ ದೇವಸ್ಥಾನದಲ್ಲಿ ನಡೆಯಲಿದೆ.

ಆಗಸ್ಟ್ 18ರಂದು ದೇವಿಯರ ಮೂರ್ತಿ ಪ್ರತಿಷ್ಠಾಪನೆಯೊಂದಿಗೆ ಜಾತ್ರೆಗೆ ಚಾಲನೆ ದೊರೆಯಲಿದೆ. ಬಳಿಕ ಪ್ರತಿದಿನ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿದ್ದು, ಆಗಸ್ಟ್ 24ರಂದು ಮಹಾ ಅನ್ನಸಂತರ್ಪಣೆ, ಆಗಸ್ಟ್ 25ರಂದು ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಹಾಗೂ



ನಗರದ ವಿವಿಧ ದೇವಸ್ಥಾನಗಳಿಗೆ ಉಡಿ ತುಂಬುವ ಮತ್ತು ಕಾಯಿ ಒಡೆಯುವ ಸಂಪ್ರದಾಯಗಳು ಜರುಗಲಿವೆ.

ಆಗಸ್ಟ್ 26ರಂದು ದೇವಿಯರ ಮೂರ್ತಿಗಳನ್ನು ಮಂಗಳ ವಾದ್ಯಗಳೊಂದಿಗೆ ಭವ್ಯ ಮೆರವಣಿಗೆಯಲ್ಲಿ ಕಿಲ್ಲಾದ ದೇವಸ್ಥಾನಕ್ಕೆ ಕೊಂಡೊಯ್ದು ಪ್ರತಿಷ್ಠಾಪಿಸಲಾಗುವುದು. ಆಗಸ್ಟ್ 28ರಂದು ಮಹಾಹೋಮ, ಅನ್ನಸಂತರ್ಪಣೆ ಹಾಗೂ ಸಮಾರೋಪ ಸಮಾರಂಭ ನಡೆಯಲಿದೆ.

## 64 ಸಮಾಜಗಳ ಭಕ್ತರ ಸಾಥ್

**ಹಲವು ವರ್ಷಗಳ ಬಳಿಕ ನಡೆಯುತ್ತಿರುವ ಹರಿಜಾತ್ರೆಯನ್ನು ಯಶಸ್ವಿಗೊಳಿಸಲು ಗದಗ ನಗರದ 64 ವಿವಿಧ ಸಮಾಜಗಳ ಮುಖಂಡರು ತನು-ಮನ-ಧನದಿಂದ ಸಹಕರಿಸುವುದಾಗಿ ಸಭೆಯಲ್ಲಿ ಸಂಕಲ್ಪ ಕೈಗೊಂಡರು. ಜಾತ್ರೆಯನ್ನು ಐತಿಹಾಸಿಕವಾಗಿ ಆಚರಿಸಲು ಎಲ್ಲ ಸಮಾಜಗಳ ಸಕ್ರಿಯ ಭಾಗವಹಿಸುವಿಕೆಗೆ ಕರೆ ನೀಡಲಾಯಿತು.**

ರಾಜ್ಯ ಪ್ರಶಸ್ತಿ ಪುರಸ್ಕೃತ ಕೀರ್ತನಕಾರ ಕಲ್ಲಿನಾಥ ಶಾಸ್ತ್ರಿಗಳು ದೇವಿಯರ ಮಹಿಮೆ ಹಾಗೂ ಹರಿಜಾತ್ರೆಯ ಮಹತ್ವದ ಕುರಿತು ಉಪನ್ಯಾಸ ನೀಡಿದರು.

ಸಭೆಯ ಅಧ್ಯಕ್ಷತೆಯನ್ನು ಟ್ರಸ್ಟ್ ಸಮಿತಿ ಅಧ್ಯಕ್ಷ ಕೊಟ್ರಪ್ಪ ಕಮತರ ವಹಿಸಿದ್ದರು. ವಿವಿಧ ಸಮಾಜಗಳ ಮುಖಂಡರು, ಪದಾಧಿಕಾರಿಗಳು ಹಾಗೂ ನೂರಾರು ಭಕ್ತರು ಉಪಸ್ಥಿತರಿದ್ದರು.

### ಜಾತ್ರೆಯ ಪ್ರಮುಖ ಕಾರ್ಯಕ್ರಮಗಳು

- ★ಆಗಸ್ಟ್ 18: ದೇವಿಯರ ಮೂರ್ತಿ ಪ್ರತಿಷ್ಠಾಪನೆ
- ★ಆಗಸ್ಟ್ 18-25: ಪ್ರತಿದಿನ ಸಂಜೆ ಸಾಂಸ್ಕೃತಿಕ ಕಾರ್ಯಕ್ರಮಗಳು
- ★ಆಗಸ್ಟ್ 24: ಮಹಾ ಅನ್ನಸಂತರ್ಪಣೆ
- ★ಆಗಸ್ಟ್ 25: ಮುತ್ತೈದೆಯರಿಗೆ ಉಡಿ ತುಂಬುವ ಹಾಗೂ ಕಾಯಿ ಒಡೆಯುವ ಕಾರ್ಯಕ್ರಮ
- ★ಆಗಸ್ಟ್ 26: ದ್ಯಾಮಮ್ಮದುರ್ಗಮ್ಮ ದೇವಿಯರ ಭವ್ಯ ಮೆರವಣಿಗೆ ಮತ್ತು ಮೂರ್ತಿ ಪ್ರತಿಷ್ಠಾಪನೆ
- ★ಆಗಸ್ಟ್ 28: ಮಹಾಹೋಮ, ಅನ್ನಸಂತರ್ಪಣೆ ಹಾಗೂ ಸಮಾರೋಪ

### ದೇಶದ ಗಮನ ಸೆಳೆಯುವ ಶಿಕ್ಷಣ ಕೇಂದ್ರವನ್ನಾಗಿ ರೂಪಿಸುವ ಗುರಿ: ಕುಲಪತಿ ಡಾ. ಎಸ್.ವಿ. ನಾಡಗೌಡರ

# ಗ್ರಾಮೀಣ ವಿಶ್ವವಿದ್ಯಾಲಯಕ್ಕೆ ಹೊಸ ದಿಕ್ಸೂಚಿ



**ವಿಜಯಸಾಕ್ಷಿ ಸುದ್ದಿ, ಗದಗ**

ಗ್ರಾಮಗಳ ಅಭಿವೃದ್ಧಿಯಲ್ಲೇ ದೇಶದ ಅಭಿವೃದ್ಧಿ ಅಡಗಿದೆ ಎಂಬ ಮಹಾತ್ಮ ಗಾಂಧೀಜಿಯವರ ಚಿಂತನೆಗೆ ಅನುಗುಣವಾಗಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯವನ್ನು ದೇಶಕ್ಕೇ ಮಾದರಿಯಾಗುವ ಶಿಕ್ಷಣ ಸಂಸ್ಥೆಯನ್ನಾಗಿ ರೂಪಿಸಲು ಪ್ರಾಮಾಣಿಕವಾಗಿ ಶ್ರಮಿಸುವುದಾಗಿ ನೂತನ ಕುಲಪತಿ ಡಾ. ಎಸ್.ವಿ. ನಾಡಗೌಡರ ಹೇಳಿದರು.

ಕರ್ನಾಟಕ ರಾಜ್ಯ ಪದವಿಪೂರ್ವ ಕಾಲೇಜುಗಳ ನೌಕರರ ಸಂಘದ ಗದಗ ಜಿಲ್ಲಾ ಘಟಕ, ಪದವಿಪೂರ್ವ ಕಾಲೇಜುಗಳ ಉಪನ್ಯಾಸಕರ ಸಂಘ ಹಾಗೂ ಪ್ರಾಚಾರ್ಯರ ಸಂಘದ ವತಿಯಿಂದ ಆಯೋಜಿಸಿದ್ದ ಸನ್ಮಾನ ಸಮಾರಂಭದಲ್ಲಿ ಗೌರವ ಸ್ವೀಕರಿಸಿ ಅವರು ಮಾತನಾಡಿದರು.

ಗ್ರಾಮೀಣಾಭಿವೃದ್ಧಿ, ಸ್ಥಳೀಯ ಆಡಳಿತ ಮತ್ತು ಸಂಶೋಧನೆಗೆ ಹೆಚ್ಚಿನ ಆದ್ಯತೆ ನೀಡಿ, ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ಸಮಾಜಮುಖಿ ಕೌಶಲ್ಯಗಳನ್ನು ಬೆಳೆಸುವ ನಿಟ್ಟಿನಲ್ಲಿ ವಿಶ್ವವಿದ್ಯಾಲಯವನ್ನು ಅಭಿವೃದ್ಧಿಪಡಿಸಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸರ್ಕಾರಿ ಇಲಾಖೆ ಹಾಗೂ ವಿವಿಧ ಉದ್ಯಮ ಕ್ಷೇತ್ರಗಳಲ್ಲಿ ಉದ್ಯೋಗಾವಕಾಶಗಳು ದೊರೆಯುವಂತೆ ವಿಶೇಷ ಯೋಜನೆಗಳನ್ನು ರೂಪಿಸಬೇಕೆಂದು ಮನವಿ ಮಾಡಿದರು.

**ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯವನ್ನು ದೇಶದಲ್ಲೇ ಮಾದರಿಯಾಗುವ ಶಿಕ್ಷಣ ಸಂಸ್ಥೆಯನ್ನಾಗಿ ರೂಪಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ.**

**- ಡಾ. ಎಸ್.ವಿ. ನಾಡಗೌಡರ**, ಕುಲಪತಿ

ಕಾರ್ಯಕ್ರಮದಲ್ಲಿ ಪ್ರಾಚಾರ್ಯರಾದ ಬಿ.ಜಿ. ಗಿರಿತಮ್ಮಣ್ಣವರ, ಐ.ಬಿ. ಹಾದಿಮನಿ, ಡಾ. ಬಿ.ಎಸ್. ರಾಥೋಡ್, ಎಸ್.ಬಿ. ಹಾವೇರಿ, ರವಿ ಕುಲಕರ್ಣಿ, ಎಸ್.ಎಂ. ಗುಳಗುಳಿ, ಉಪನ್ಯಾಸಕರಾದ ಡಾ. ವೈ. ಆರ್. ಬೇಲೇರಿ, ಎಸ್.ಐ. ಮೇಟಿ, ಶ್ರೀಶೈಲ್ ಬೀರಕಬ್ಬಿ, ಕೆ.ಎಸ್. ಗಂಗನಗೌಡ್ರ, ಬಿ.ಬಿ. ಮಿರ್ಜಿ, ಶರಣು ಚೇಗರೆಡ್ಡಿ, ನಿವೃತ್ತ ಉಪನ್ಯಾಸಕರಾದ ಜಿ.ಎಂ. ಹಕಾರಿ ಉಪಸ್ಥಿತರಿದ್ದರು.

ಪ್ರಾಚಾರ್ಯ ಅಶೋಕ ಅಂಗಡಿ ಸ್ವಾಗತಿಸಿದರು. ಎಂ.ಸಿ. ಕಟ್ಟಿಮನಿ ವಂದಿಸಿದರು.

## ಜಿಲ್ಲಾಧ್ಯಕ್ಷರಾಗಿ ಶ್ರೀಕಾಂತ ಪೂಜಾರ ನೇಮಕ



**ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯ ಎಸ್‌ಸಿ/ಎಸ್‌ಟಿ ನಕಲಿ ಜಾತಿ ಪ್ರಮಾಣ ಪತ್ರಗಳ ತಡೆ ಸಮಿತಿಯ ಗದಗ ಜಿಲ್ಲಾ ಘಟಕದ ನೂತನ ಜಿಲ್ಲಾಧ್ಯಕ್ಷರಾಗಿ ಯುವ ಹೋರಾಟಗಾರ ಶ್ರೀಕಾಂತ ಸಿ. ಪೂಜಾರ ಅವರನ್ನು ನೇಮಕ ಮಾಡಲಾಗಿದೆ.

ಈ ಕುರಿತು ಸಮಿತಿಯ ರಾಜ್ಯಾಧ್ಯಕ್ಷ ಶ್ರವಣಕುಮಾರ ಡಿ. ನಾಯಕ ಆದೇಶ ಹೊರಡಿಸಿದ್ದು, ಸಂಘಟನೆಯನ್ನು ತಳಮಟ್ಟದಿಂದ ಮತ್ತಷ್ಟು ಬಲಪಡಿಸುವ ಜತೆಗೆ ಎಸ್‌ಸಿ/ಎಸ್‌ಟಿ ಸಮುದಾಯಗಳ ಹೆಸರಿನಲ್ಲಿ ನಡೆಯುವ ನಕಲಿ ಜಾತಿ ಪ್ರಮಾಣ ಪತ್ರಗಳ ದಂಧೆ ವಿರುದ್ಧ ಕಾನೂನುಬದ್ಧ ಹೋರಾಟ ನಡೆಸುವಂತೆ ಸೂಚಿಸಿದ್ದಾರೆ.

ಸಮಿತಿಯ ನಿಯಮಾವಳಿಗಳಿಗೆ ಬದ್ಧರಾಗಿ ಕಾರ್ಯನಿರ್ವಹಿಸಿ, ಅರ್ಹ ಫಲಾನುಭವಿಗಳಿಗೆ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ಸಮಾಜಮುಖಿ ಸೇವೆ ಸಲ್ಲಿಸುವಂತೆ ನೂತನ ಜಿಲ್ಲಾಧ್ಯಕ್ಷರಿಗೆ ಅವರು ಶುಭ ಹಾರೈಸಿದ್ದಾರೆ.

## ಪ್ರತಿಭಾ ಪುರಸ್ಕಾರಕ್ಕೆ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ದಲಿತ ಸಂಘರ್ಷ ಸಮಿತಿ (ರಿ) (ಪ್ರೊ. ಬಿ. ಕೃಷ್ಣಪ್ಪ ಸ್ಥಾಪಿತ) ಗದಗ ತಾಲೂಕು ಘಟಕದ ವತಿಯಿಂದ ಆಗಸ್ಟ್ 2ರಂದು ಗದಗ ನಗರದ ಡಾ. ಬಿ.ಆರ್. ಅಂಬೇಡ್ಕರ ಭವನದಲ್ಲಿ ತಾಲೂಕು ಮಟ್ಟದ ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ ದಲಿತರ ಸಬಲೀಕರಣ ಕುರಿತ ವಿಚಾರ ಸಂಕಿರಣ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳು ಮತ್ತು ಸಾಧಕರಿಗೆ ಸನ್ಮಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

2025-26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಶೇ.60ಕ್ಕಿಂತ ಹೆಚ್ಚು ಅಂಕ ಪಡೆದ ಗದಗ ತಾಲೂಕು ವ್ಯಾಪ್ತಿಯ ಗದಗ-ಬೆಟಗೇರಿ ನಗರ ಹಾಗೂ ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಸಲ್ಲಿಸಬಹುದು.

ಆಸಕ್ತ ವಿದ್ಯಾರ್ಥಿಗಳು ತಮ್ಮ ಅಂಕಪಟ್ಟಿಯ ಪ್ರತಿ ಹಾಗೂ ವಿಳಾಸದೊಂದಿಗೆ ಜುಲೈ 25ರೊಳಗೆ ಅರ್ಜಿ ಸಲ್ಲಿಸುವಂತೆ ಗದಗ ತಾಲೂಕು ಸಂಚಾಲಕ ವಿನಾಯಕ ಎಸ್. ಬಳ್ಳಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಕೃಷ್ಣಾ ಪೂಜಾರ (7353508775), ಮಧು ಬಳ್ಳಾರಿ (7022226459), ವಿಶಾಲ ಗೋಶಲನವರ (9743339307), ವಿನಾಯಕ ಬಳ್ಳಾರಿ (7259356967) ಹಾಗೂ ಮುತ್ತು ಮಾದರ (8746823687) ಅವರನ್ನು ಸಂಪರ್ಕಿಸಬಹುದು.

### ಸಾಂಸ್ಕೃತಿಕ ಚಟುವಟಿಕೆಗಳಿಗೆ ಚಾಲನೆ ಶಾಲಾ ಸಂಸತ್ ಪದಾಧಿಕಾರಿಗಳ ಪ್ರಮಾಣವಚನ ಸ್ವೀಕಾರ ಸಮಾರಂಭದಲ್ಲಿ ದೊಡ್ಡಮೇಟಿ

# ಶಿಕ್ಷಣದ ಮೂಲಕ ಸಮಾಜ ಕಟ್ಟಿದ ಅನ್ನದಾನ ಮಹಾಸ್ವಾಮಿಗಳು

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪೂಜ್ಯಗುರು ಅನ್ನದಾನ ಮಹಾಸ್ವಾಮಿಗಳ ದೂರದೃಷ್ಟಿ, ತ್ಯಾಗ ಮತ್ತು ಶಿಕ್ಷಣದ ಮೇಲಿನ ಅಪಾರ ಕಾಳಜಿಯಿಂದ ಆರಂಭವಾದ ಶ್ರೀ ಅನ್ನದಾನ ವಿಜಯ ವಿದ್ಯಾಪ್ರಸಾರಕ ಸಮಿತಿಯು ಇಂದು ಸಾವಿರಾರು ವಿದ್ಯಾರ್ಥಿಗಳ ಬದುಕಿಗೆ ಬೆಳಕಾಗಿ, ಹೆಣ್ಣುಮಕ್ಕಳ ಶಿಕ್ಷಣ ಕ್ಷೇತ್ರದಲ್ಲಿ ಮಾದರಿ ಸಂಸ್ಥೆಯಾಗಿ ಬೆಳೆದಿದೆ ಎಂದು ಸಮಿತಿಯ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ ಹೇಳಿದರು.

ಪಟ್ಟಣದ ಶ್ರೀ ಅನ್ನದಾನ ವಿಜಯ ಬಾಲಕಿಯರ ಪ್ರೌಢಶಾಲೆಯಲ್ಲಿ 202627ನೇ ಶೈಕ್ಷಣಿಕ ಸಾಲಿನ ಸಾಂಸ್ಕೃತಿಕ ಚಟುವಟಿಕೆಗಳ ಉದ್ಘಾಟನೆ, ಶಾಲಾ ಸಂಸತ್ ಪದಾಧಿಕಾರಿಗಳ ಪ್ರಮಾಣವಚನ ಸ್ವೀಕಾರ ಹಾಗೂ ಸಂಸ್ಥಾಪಕರ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು.

1943ರಲ್ಲಿ ಪೂಜ್ಯಗುರು ಅನ್ನದಾನ ಮಹಾಸ್ವಾಮಿಗಳ ಆಶಯದಂತೆ ಸ್ಥಾಪನೆಯಾದ ಸಂಸ್ಥೆ, ಶಿಕ್ಷಣವನ್ನು ಸಮಾಜ ಪರಿವರ್ತನೆಯ ಸಾಧನವನ್ನಾಗಿ ರೂಪಿಸಿಕೊಂಡಿದೆ. ಅದರ ಮುಂದುವರಿದ ಭಾಗವಾಗಿ 1972ರಲ್ಲಿ ಆರಂಭವಾದ ಬಾಲಕಿಯರ ಪ್ರೌಢಶಾಲೆ ಗ್ರಾಮೀಣ ಹೆಣ್ಣುಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಿ ಸಾವಿರಾರು ವಿದ್ಯಾರ್ಥಿನಿಯರ ಭವಿಷ್ಯ ರೂಪಿಸಿದೆ ಎಂದು ಹೇಳಿದರು.

ಈ ಶಾಲೆಯ ಹಳೆಯ ವಿದ್ಯಾರ್ಥಿನಿಯರು ಶಿಕ್ಷಕಿಯರು, ವೈದ್ಯರು, ಅಧಿಕಾರಿಗಳು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿ ಸಮಾಜ ಸೇವೆಯಲ್ಲಿ ತೊಡಗಿರುವುದು ಸಂಸ್ಥೆಯ ಹೆಮ್ಮೆಯಾಗಿದೆ. ಶಿಕ್ಷಣವು ಕೇವಲ ಉದ್ಯೋಗಕ್ಕಲ್ಲ, ಉತ್ತಮ ವ್ಯಕ್ತಿತ್ವ ಮತ್ತು ಮೌಲ್ಯಯುತ ಬದುಕು ರೂಪಿಸುವ ಸಾಧನವಾಗಬೇಕು ಎಂದು ಕರೆ ನೀಡಿದರು.



**ಅನ್ನದಾನ ಮಹಾಸ್ವಾಮಿಗಳ ಶಿಕ್ಷಣದ ಕನಸು ಇಂದು ಸಾವಿರಾರು ವಿದ್ಯಾರ್ಥಿನಿಯರ ಬದುಕು ಬೆಳಗಿಸುತ್ತಿದೆ. ಶಿಕ್ಷಣದ ಮೂಲಕ ಸಮಾಜ ಪರಿವರ್ತನೆ ಸಾಧ್ಯ ಎಂಬುದನ್ನು ನಮ್ಮ ಸಂಸ್ಥೆ ಸಾಬೀತುಪಡಿಸಿದೆ.**

**- ರವೀಂದ್ರನಾಥ ದೊಡ್ಡಮೇಟಿ,**
ಪ್ರಧಾನ ಕಾರ್ಯದರ್ಶಿ,
ಶ್ರೀ ಅನ್ನದಾನ ವಿಜಯ ವಿದ್ಯಾಪ್ರಸಾರಕ ಸಮಿತಿ

ಸಾಂಸ್ಕೃತಿಕ ಚಟುವಟಿಕೆಗಳನ್ನು ಉದ್ಘಾಟಿಸಿದ ಎಸ್.ಎ. ಪದವಿ ಮಹಾವಿದ್ಯಾಲಯದ ಪ್ರಾಚಾರ್ಯ ಎಸ್.ಜಿ. ಕೇಶಣ್ಣವರ, ಪಠ್ಯದ ಜೊತೆಗೆ ಸಾಂಸ್ಕೃತಿಕ ಚಟುವಟಿಕೆಗಳು ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ಪೂರಕವಾಗುತ್ತವೆ. ಪ್ರತಿಯೊಬ್ಬ ವಿದ್ಯಾರ್ಥಿನಿಯೂ ಕಲೆ, ಸಾಹಿತ್ಯ, ಸಂಗೀತ ಹಾಗೂ ಕ್ರೀಡಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಹೇಳಿದರು.

ಶಾಲಾ ಸಂಸತ್ ಫಲಕವನ್ನು ಉದ್ಘಾಟಿಸಿದ ಅಭಿನವ ಅನ್ನದಾನೇಶ್ವರ ಪದವಿಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯೆ ಅನಸೂಯಾ ಪಾಟೀಲ, ಶಾಲಾ ಸಂಸತ್ತು ವಿದ್ಯಾರ್ಥಿಗಳಲ್ಲಿ ನಾಯಕತ್ವ, ಜವಾಬ್ದಾರಿ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಬೆಳೆಸುವ ವೇದಿಕೆಯಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಂಗವಾಗಿ ಸಂಸ್ಥಾಪಕರ ದಿನಾಚರಣೆಯನ್ನು ವೀರಣ್ಣ ಹಳ್ಳಿ ನೆರವೇರಿಸಿದರು. ಇದೇ ವೇಳೆ 200506ನೇ ಸಾಲಿನ ಹಳೆಯ ವಿದ್ಯಾರ್ಥಿನಿಯರು ಶಾಲೆಗೆ ಪ್ರದರ್ಶನ ಫಲಕವನ್ನು ದೇಣಿಗೆಯಾಗಿ ನೀಡಿ ಉದ್ಘಾಟಿಸಿದರು. ಶಾಲಾ ಸಂಸತ್ ಸದಸ್ಯರಿಗೆ ಎಸ್. ಶಿವಮೂರ್ತಿ ಪ್ರಮಾಣವಚನ ಬೋಧಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮುಖ್ಯೋಪಾಧ್ಯಾಯ ಎಸ್.ಎನ್. ಹೂಲಗೇರಿ ವಹಿಸಿದ್ದರು. ಎ.ಟಿ. ಮಳ್ಳಳ್ಳಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಆಡಳಿತ ಮಂಡಳಿಯ ಸದಸ್ಯರು, ಶಿಕ್ಷಕರು, ಹಳೆಯ ವಿದ್ಯಾರ್ಥಿನಿಯರು ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

ಕಾರ್ಯಕ್ರಮದ ಕೊನೆಯಲ್ಲಿ ವಿದ್ಯಾರ್ಥಿನಿಯರು ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಪ್ರಸ್ತುತಪಡಿಸಿ ಮೆಚ್ಚುಗೆ ಪಡೆದರು.

## ಆಂಗ್ಲೋ ಉರ್ದು ಶಾಲೆಯಲ್ಲಿ ಶಾಲಾ ಸಂಸತ್ ರಚನೆ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಪ್ರತಿಷ್ಠಿತ ಆಂಗ್ಲೋ ಉರ್ದು ಬಾಲಕಿಯರ ಪ್ರೌಢಶಾಲೆಯಲ್ಲಿ 202627ನೇ ಶೈಕ್ಷಣಿಕ ಸಾಲಿನ ಶಾಲಾ ಸಂಸತ್ತನ್ನು ಚುನಾವಣೆಯ ಮೂಲಕ ರಚಿಸಲಾಗಿದೆ.

ಶಾಲಾ ಪ್ರಧಾನ ಮಂತ್ರಿಯಾಗಿ ಕುಮಾರಿ ಮೆಹಕ್ ಕಲೆಗಾರ, ವಿರೋಧ ಪಕ್ಷದ ನಾಯಕಿಯಾಗಿ ಕುಮಾರಿ ಮುಬೀನ್ ಬೇಲೇರಿ, ಸಂಸತ್ ಅಧ್ಯಕ್ಷೆಯಾಗಿ ಕುಮಾರಿ ಆಸ್ಮಾ ಡೋಣಿ, ಶಿಕ್ಷಣ ಸಚಿವೆಯಾಗಿ ಕುಮಾರಿ ರಿಫತ್ ನದಾಫ್, ಆರೋಗ್ಯ ಸಚಿವೆಯಾಗಿ ಕುಮಾರಿ ತಯ್ಯಬಾ ಕಾತರಕಿ, ಪ್ರವಾಸೋದ್ಯಮ ಸಚಿವೆಯಾಗಿ ರೆಹಾನ್ ಗಂಧದ, ಗ್ರಂಥಾಲಯ ಸಚಿವೆಯಾಗಿ ಕುಮಾರಿ ಇನ್ನಾ ಬೇಪಾರಿ ಹಾಗೂ ಆಹಾರ ಸಚಿವೆಯಾಗಿ ಕುಮಾರಿ ಮೆಹರ್ ಬಾಗೋಡಿ ಆಯ್ಕೆಯಾಗಿದ್ದಾರೆ. ಆಯ್ಕೆಯಾದ ಶಾಲಾ ಸಂಸತ್ ಪದಾಧಿಕಾರಿಗಳನ್ನು ಮುಖ್ಯೋಪಾಧ್ಯಾಯ ಎಲ್.ಆರ್. ಇಟಗಿ, ಶಿಕ್ಷಕ-ಶಿಕ್ಷಕಿಯರು ಹಾಗೂ ಸಿಬ್ಬಂದಿ ವರ್ಗದವರು ಅಭಿನಂದಿಸಿ ಶುಭ ಹಾರೈಸಿದ್ದಾರೆ.

### ತಾಲೂಕು ಮಟ್ಟದ ಸ್ಪರ್ಧೆಯಲ್ಲಿ ಯುವ ಪ್ರತಿಭೆಗಳ ಮಿಂಚು | ವಿಜೇತರಿಗೆ ಟ್ರೋಫಿ ಪ್ರದಾನ

# ರಾಕೆಟ್ ರಂಗೇರಿಸಿದ ತಕ್ಷಶೀಲಾ ಬ್ಯಾಡ್ಮಿಂಟನ್ ಟೂರ್ನಿ


**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದ ತಕ್ಷಶೀಲಾ ಬ್ಯಾಡ್ಮಿಂಟನ್ ಕ್ಲಬ್ ವತಿಯಿಂದ ಆಯೋಜಿಸಿದ್ದ ತಾಲೂಕು ಮಟ್ಟದ ಯು-14 ಹಾಗೂ ಯು-19 ಬಾಲಕರ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿ ಯಶಸ್ವಿಯಾಗಿ ನಡೆಯಿತು. ತಾಲೂಕಿನ ವಿವಿಧ ಭಾಗಗಳಿಂದ ಆಗಮಿಸಿದ್ದ ಪ್ರತಿಭಾವಂತ ಕ್ರೀಡಾಪಟುಗಳು ಉತ್ಸಾಹದಿಂದ ಪಾಲ್ಗೊಂಡು ತಮ್ಮ ಪ್ರತಿಭೆ ಪ್ರದರ್ಶಿಸಿದರು.

ಯು-14 ವಿಭಾಗದಲ್ಲಿ ಅಥರ್ವ ಪ್ರಥಮ ಹಾಗೂ ಮನು ದ್ವಿತೀಯ ಸ್ಥಾನ ಪಡೆದರೆ, ಯು-19 ವಿಭಾಗದಲ್ಲಿ ಆಫ್ರಿದಿ ಪ್ರಥಮ ಹಾಗೂ ಸಂತೋಷ್ ನಾಯಕ್ ದ್ವಿತೀಯ ಸ್ಥಾನ ಪಡೆದು ಟ್ರೋಫಿಗೆ ಭಾಜನರಾದರು.

ಕಾರ್ಯಕ್ರಮದ ರೂವಾರಿ ಹಾಗೂ ಕೋಚ್ ಎಂ. ಸುಲೇಮಾನ್ ಮಾತನಾಡಿ, ಮುಂದಿನ ದಿನಗಳಲ್ಲಿ ಜಿಲ್ಲಾ ಹಾಗೂ ರಾಜ್ಯ ಮಟ್ಟದ ಕ್ರೀಡಾಕೂಟಗಳನ್ನು ಆಯೋಜಿಸುವ ಗುರಿ ಹೊಂದಿದ್ದೇವೆ. ಕ್ರೀಡೆ ಯುವಕರಲ್ಲಿ ಶಿಸ್ತು, ಆತ್ಮವಿಶ್ವಾಸ ಮತ್ತು ಆರೋಗ್ಯಕರ ಜೀವನಶೈಲಿಯನ್ನು ಬೆಳೆಸುತ್ತದೆ ಎಂದು ಹೇಳಿದರು.

ಟ್ರೋಫಿ ಪ್ರಾಯೋಜಕ ಶೇಕ್ ಅಹಮದ್ ಮಾತನಾಡಿ, ಕ್ರೀಡಾಪಟುಗಳಿಗೆ ಸೂಕ್ತ ಪ್ರೋತ್ಸಾಹ ನೀಡುವುದು ಸಮಾಜದ ಜವಾಬ್ದಾರಿಯಾಗಿದೆ. ಪ್ರತಿಭಾವಂತರಿಗೆ ಬೆಂಬಲ ಸಿಕ್ಕರೆ ಅವರು ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಸಾಧನೆ ಮಾಡುತ್ತಾರೆ ಎಂದರು.



ಟೂರ್ನಿಯ ಪ್ರಾಯೋಜಕ ರಾಘವೇಂದ್ರ, ಮಾತನಾಡಿ, ಕ್ರೀಡೆ ಕೇವಲ ಸ್ಪರ್ಧೆಯಲ್ಲ, ವ್ಯಕ್ತಿತ್ವ ರೂಪಿಸುವ ಸಾಧನವೂ ಆಗಿದೆ ಎಂದು ಹೇಳಿದರು.

ಮುಖ್ಯ ಅತಿಥಿ ಸಂಚಿ ಶಿವಕುಮಾರ್ ಮಾತನಾಡಿ, ಇಂದಿನ ಯುವಕರು ಮೊಬೈಲ್ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಸಮಯ ವ್ಯರ್ಥ ಮಾಡುವ ಬದಲು ಕ್ರೀಡೆಯಲ್ಲಿ ತೊಡಗಿಸಿಕೊಳ್ಳಬೇಕು. ಕ್ರೀಡೆ ಮಾನಸಿಕ ಆರೋಗ್ಯ ವೃದ್ಧಿಸುವುದರ ಜೊತೆಗೆ ಉತ್ತಮ ಜೀವನ ಮೌಲ್ಯಗಳನ್ನು ಕಲಿಸುತ್ತದೆ ಎಂದು ಹೇಳಿದರು.

**ಗ್ರಾಮೀಣ ಭಾಗದ ಮಕ್ಕಳಲ್ಲೂ ಅಪಾರ ಪ್ರತಿಭೆ ಅಡಗಿದೆ. ಅವರಿಗೆ ಸೂಕ್ತ ವೇದಿಕೆ ಕಲ್ಪಿಸುವ ಉದ್ದೇಶದಿಂದಲೇ ಈ ಟೂರ್ನಿಯನ್ನು ಆಯೋಜಿಸಿದ್ದೇವೆ.**

**- ಎಂ. ಸುಲೇಮಾನ್,**
ಕೋಚ್ ಹಾಗೂ ಟೂರ್ನಿ ಆಯೋಜಕರು

ಕಾರ್ಯಕ್ರಮ ಯಶಸ್ವಿಯಾಗಲು ಶಿಕ್ಷಕ ಆಂಜನೇಯ, ಕೋಚ್ ಆತಿಫ್, ತಕ್ಷಶೀಲಾ ಬ್ಯಾಡ್ಮಿಂಟನ್ ಕ್ಲಬ್‌ನ ಪದಾಧಿಕಾರಿಗಳು ಹಾಗೂ ಸದಸ್ಯರು ಸಹಕರಿಸಿದರು.

## ಸರ್ಕಾರಿ ಶಾಲಾ ಮಕ್ಕಳಿಗೆ ಶಿಕ್ಷಣ ಕಿಟ್ ವಿತರಣೆ




**ವಿಜಯಸಾಕ್ಷಿ ಸುದ್ದಿ, ಗದಗ**

ದ್ವಾರಕಾಮಾಯಿ ಫೌಂಡೇಶನ್ ಹಾಗೂ ಅಮೃತಾ ಟೂಲ್ಸ್ ಆ್ಯಂಡ್ ಕ್ರಾಫ್ಟ್ ಪ್ರೈವೇಟ್ ಲಿಮಿಟೆಡ್, ಹೈದರಾಬಾದ್ ಸಹಯೋಗದಲ್ಲಿ ಉಂಡೇನಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ 86 ವಿದ್ಯಾರ್ಥಿಗಳಿಗೆ ಶಾಲಾ ಬ್ಯಾಗ್, ನೋಟ್‌ಪುಸ್ತಕ, ಪೆನ್ ಹಾಗೂ ಪೆನ್ಸಿಲ್ ಕಿಟ್‌ಗಳನ್ನು ವಿತರಿಸಲಾಯಿತು.

ಶಾಲೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಎಸ್‌ಡಿಎಂಸಿ ಸದಸ್ಯರು, ಗ್ರಾಮ ಪಂಚಾಯಿತಿ ಸದಸ್ಯರು, ಶಾಲೆಯ ಮುಖ್ಯ ಶಿಕ್ಷಕರು ಹಾಗೂ ದ್ವಾರಕಾಮಾಯಿ ಸಂಸ್ಥೆಯ ಸ್ವಯಂಸೇವಕರು ವಿದ್ಯಾರ್ಥಿಗಳಿಗೆ ಶಿಕ್ಷಣ ಸಾಮಗ್ರಿಗಳನ್ನು ವಿತರಿಸಿ, ಅವುಗಳನ್ನು ಸದುಪಯೋಗಪಡಿಸಿಕೊಳ್ಳುವಂತೆ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಎಸ್‌ಡಿಎಂಸಿ ಪದಾಧಿಕಾರಿಗಳು, ಗ್ರಾಮ ಪಂಚಾಯಿತಿ ಸದಸ್ಯರು, ಮುಖ್ಯ ಶಿಕ್ಷಕರು, ಸಹ ಶಿಕ್ಷಕರು, ದ್ವಾರಕಾಮಾಯಿ ಸಂಸ್ಥೆಯ ಸ್ವಯಂಸೇವಕರಾದ ಖಾಜಾವಾಲಿ ಮುಲ್ಲಾ, ಗಣೇಶ ಚವಡಿ, ಬಸವರಾಜ ಕಟಗಿ ಹಾಗೂ ಶಾಲೆಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಧರ್ಮಸ್ಥಳ ಗ್ರಾಮಾಭಿವೃದ್ಧಿ ಟ್ರಸ್ಟ್‌ನ ಸ್ವಾಸ್ಥ ಸಂಕಲ್ಪ ಕಾರ್ಯಕ್ರಮದಲ್ಲಿ ಬಸವರಾಜ ದಂಡಿನ ಅಭಿಮತ

# ದುಶ್ಚಟಗಳಿಂದ ದೂರವಿದ್ದರೆ ಯಶಸ್ಸು ಖಚಿತ

**ವಿಜಯಸಾಕ್ಷಿ ಸುದ್ದಿ, ಗದಗ**

ದುಶ್ಚಟಗಳು ವಿದ್ಯಾರ್ಥಿಗಳ ವ್ಯಕ್ತಿತ್ವವನ್ನು ದುರ್ಬಲಗೊಳಿಸುತ್ತವೆ. ಉತ್ತಮ ಆರೋಗ್ಯ, ಶಿಸ್ತು ಮತ್ತು ನಿರಂತರ ಅಧ್ಯಯನದೊಂದಿಗೆ ಉತ್ತಮ ಸಂಸ್ಕಾರ ಬೆಳೆಸಿಕೊಂಡರೆ ಜೀವನದಲ್ಲಿ ಯಶಸ್ಸು ಸಾಧಿಸಲು ಸಾಧ್ಯ ಎಂದು ಹಿರಿಯ ಪತ್ರಕರ್ತ ಬಸವರಾಜ ದಂಡಿನ ಹೇಳಿದರು.

ನಗರದ ಸಂಕೇತ ಕಾಲೇಜಿನಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ (ಬಿ.ಸಿ. ಟ್ರಸ್ಟ್) ವತಿಯಿಂದ ಆಯೋಜಿಸಿದ್ದ ಸ್ವಾಸ್ಥ ಸಂಕಲ್ಪಟಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಉತ್ತಮರ ಸಹವಾಸದಿಂದ ಉತ್ತಮ ವಿಚಾರಗಳು ಮೂಡುತ್ತವೆ. ವಿದ್ಯಾರ್ಥಿಗಳು ಯಾವುದೇ ದುಶ್ಚಟಗಳಿಗೆ ಬಲಿಯಾಗದೆ, ಹಿರಿಯರ ಮಾರ್ಗದರ್ಶನದಲ್ಲಿ ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಗದಗ ತಾಲೂಕು ಮದ್ಯವರ್ಜನ ವ್ಯವಸ್ಥಾಪನಾ ಸಮಿತಿಯ ಉಪಾಧ್ಯಕ್ಷ ಶ್ರೀನಿವಾಸ ಹುಯಿಲಗೋಳ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಉತ್ತಮ ಜೀವನ ಮೌಲ್ಯಗಳನ್ನು ಬೆಳೆಸುವ ಉದ್ದೇಶದಿಂದ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಇಂತಹ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುವುದು ಶ್ಲಾಘನೀಯ ಎಂದರು.

**ವಿದ್ಯಾರ್ಥಿ ಜೀವನದಲ್ಲಿ ಶಿಸ್ತು, ಉತ್ತಮ ಆರೋಗ್ಯ ಮತ್ತು ದುಶ್ಚಟಗಳಿಂದ ದೂರವಿರುವ ಮನೋಭಾವವೇ ಯಶಸ್ಸಿನ ಭದ್ರ ಬುನಾದಿ.**

**- ಬಸವರಾಜ ದಂಡಿನ,** ಹಿರಿಯ ಪತ್ರಕರ್ತ

ಕಾರ್ಯಕ್ರಮದ ಅಂಗವಾಗಿ ನಡೆದ ವೆಬಿನಾರ್‌ನಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ಡಾ. ಡಿ. ವೀರೇಂದ್ರ ಹೆಗ್ಗಡೆ ಅವರು ಉತ್ತಮ ಜೀವನಶೈಲಿ, ಆರೋಗ್ಯ ಹಾಗೂ ಮೌಲ್ಯಯುತ ಬದುಕಿನ ಕುರಿತು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಚಾರ್ಯ ಮಾರುತಿ ಪೂಜಾರ, ಧರ್ಮಸ್ಥಳ ಗ್ರಾಮಾಭಿವೃದ್ಧಿ



ಯೋಜನೆಯ ಮೇಲ್ವಿಚಾರಕಿ ಲಕ್ಷ್ಮಿ ಪಾವಸ್ಕಾರ್, ಸೇವಾ ಪ್ರತಿನಿಧಿಗಳಾದ ಸುಜಾತಾ ಪಾಟೀಲ, ಲಕ್ಷ್ಮಿ ಅರಮನಿ, ಜ್ಯೋತಿ ಗೌಡರ ಸೇರಿದಂತೆ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಸಂಕ್ಷಿಪ್ತ ಸುದ್ದಿಗಳು

ಶುದ್ಧ ಕುಡಿಯುವ ನೀರು ಪೂರೈಕೆಗೆ ಆಗ್ರಹ
ಬರಗಾಲ ಘೋಷಣೆಗೆ ರೈತರ ಪರ ಮನವಿ

# ಐದು ವರ್ಷಗಳಿಂದ ನೀರಿನ ಘಟಕ ಬಂದ್; ಗ್ರಾಮಸ್ಥರ ಆಕ್ರೋಶ



**ವಿಜಯಸಾಕ್ಷಿ ಸುದ್ದಿ, ಗದಗ**

ಶಿರಹಟ್ಟಿ ತಾಲೂಕಿನ ಶಿವಾಜಿನಗರ (ಮಜ್ಜೂರ) ತಾಂಡಾದಲ್ಲಿ ಕಳೆದ ಐದು ವರ್ಷಗಳಿಂದ ಸ್ಥಗಿತಗೊಂಡಿರುವ ಎರಡು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಕೂಡಲೇ ದುರಸ್ತಿಪಡಿಸಿ ಸಾರ್ವಜನಿಕರ ಬಳಕೆಗೆ ಮುಕ್ತಗೊಳಿಸಬೇಕು ಎಂದು ವಕೀಲ ರವಿಕಾಂತ ಅಂಗಡಿ ನೇತೃತ್ವದಲ್ಲಿ ಗ್ರಾಮಸ್ಥರು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರಿಗೆ ಮನವಿ ಸಲ್ಲಿಸಿದರು.

ಮನವಿ ಸಲ್ಲಿಸಿ ಮಾತನಾಡಿದ ರವಿಕಾಂತ ಅಂಗಡಿ, ಸುಮಾರು 550 ಮನೆಗಳು ಹಾಗೂ 2,500ಕ್ಕೂ ಹೆಚ್ಚು ಜನಸಂಖ್ಯೆ ಹೊಂದಿರುವ ತಾಂಡಾದಲ್ಲಿ ಶುದ್ಧ ಕುಡಿಯುವ ನೀರಿನ ಸಮರ್ಪಕ ವ್ಯವಸ್ಥೆಯೇ ಇಲ್ಲ. ಗ್ರಾಮಸ್ಥರು ಫ್ಲೋರೈಡ್ ಅಂಶ ಹೆಚ್ಚಿರುವ ಬೋರ್‌ವೆಲ್ ನೀರನ್ನೇ ಅವಲಂಬಿಸಿರುವುದರಿಂದ ಆರೋಗ್ಯ ಸಮಸ್ಯೆಗಳು ಹೆಚ್ಚುತ್ತಿವೆ. ಗ್ರಾಮದಲ್ಲಿರುವ ಎರಡು ಶುದ್ಧ ನೀರಿನ ಘಟಕಗಳು ಐದು ವರ್ಷಗಳಿಂದ ಸ್ಥಗಿತಗೊಂಡಿದ್ದರೂ ಸಂಬಂಧಪಟ್ಟ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದ್ದಾರೆ ಎಂದು ಆರೋಪಿಸಿದರು.

ಸಾರ್ವಜನಿಕ ಆರೋಗ್ಯದ ಹಿತದೃಷ್ಟಿಯಿಂದ ನೀರು ಶುದ್ಧೀಕರಣ ಘಟಕಗಳನ್ನು ತಕ್ಷಣ ದುರಸ್ತಿಪಡಿಸಿ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು. ಇಲ್ಲವಾದರೆ ಗ್ರಾಮಸ್ಥರೊಂದಿಗೆ ಕಾನೂನುಬದ್ಧ ಹೋರಾಟ ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

**ಐದು ವರ್ಷಗಳಿಂದ ಶುದ್ಧ ನೀರಿನ ಘಟಕಗಳು ಬಂದ್ ಆಗಿರುವುದು ಗ್ರಾಮಸ್ಥರ ದುರ್ದೈವ. ಹಲವು ಬಾರಿ ಮನವಿ ಮಾಡಿದರೂ ಸ್ಪಂದನೆ ಸಿಕ್ಕಿಲ್ಲ. ಕೂಡಲೇ ದುರಸ್ತಿ ಮಾಡದಿದ್ದರೆ ಉಗ್ರ ಹೋರಾಟ ನಡೆಸಲಾಗುವುದು.**

**- ರಮೇಶ ಮಾನಪ್ಪ ಲಮಾಣಿ,**
ಗ್ರಾಮ ಪಂಚಾಯಿತಿ ಮಾಜಿ ಸದಸ್ಯ

ಇದೇ ವೇಳೆ ಜಿಲ್ಲೆಯ ರೈತರು ಮಳೆ ಕೊರತೆಯಿಂದ ತೀವ್ರ ಸಂಕಷ್ಟದಲ್ಲಿದ್ದು, ಸರ್ಕಾರ ಕೂಡಲೇ ಗದಗ ಜಿಲ್ಲೆಯನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿ ರೈತರ ಹಿತಾಸಕ್ತಿ ಕಾಪಾಡಬೇಕು ಎಂದು ಆಗ್ರಹಿಸಿದರು.

ಮನವಿ ಸ್ವೀಕರಿಸಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪಂಚಾಯಿತಿ ಅಧಿಕಾರಿಗಳು ಹಾಗೂ ಇಂಜಿನಿಯರ್‌ಗಳೊಂದಿಗೆ ಚರ್ಚಿಸಿ ಎರಡು ದಿನಗಳೊಳಗೆ ಶುದ್ಧ ನೀರಿನ ಘಟಕಗಳನ್ನು ದುರಸ್ತಿಪಡಿಸಲಾಗುವುದು ಎಂದು ಭರವಸೆ ನೀಡಿದರು. ಬರಗಾಲ ಘೋಷಣೆ ಕುರಿತು ಸರ್ಕಾರದ ಗಮನಕ್ಕೆ ವಿಷಯ ತರುವುದಾಗಿ ತಿಳಿಸಿದರು. ಅಲ್ಲದೆ, ಬೆಳೆ ಸಾಲ ಪಡೆದ ರೈತರು ಸಮೀಪದ ಸಿಎಸ್‌ಸಿ ಕೇಂದ್ರಗಳಿಗೆ ತೆರಳಿ ಜುಲೈ 16ರೊಳಗೆ ಬೆಳೆ ವಿಮೆ ಪಾವತಿಸಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಗಣೇಶ ಲಮಾಣಿ, ಭಾಪೂಜಿ ಲಮಾಣಿ, ಪ್ರಕಾಶ ಲಮಾಣಿ, ತುಕಾರಾಮ ಲಮಾಣಿ, ಕೇಶಪ್ಪ ಲಮಾಣಿ, ಅರುಣ ಲಮಾಣಿ, ಜಗದೀಶ ಲಮಾಣಿ, ರವಿ ಲಮಾಣಿ, ರಮೇಶ ಲಮಾಣಿ, ಸುರೇಶ ಲಮಾಣಿ ಸೇರಿದಂತೆ ಶಿವಾಜಿನಗರ (ಮಜ್ಜೂರ) ತಾಂಡಾದ ಗ್ರಾಮಸ್ಥರು ಉಪಸ್ಥಿತರಿದ್ದರು.

# ಅಬ್ಬಿಗೇರಿಯಲ್ಲಿ ಇಂದು ಉಚಿತ ನೇತ್ರ ತಪಾಸಣಾ ಶಿಬಿರ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಗ್ರಾಮೀಣ ಭಾಗದ ಜನರಿಗೆ ಗುಣಮಟ್ಟದ ಕಣ್ಣಿನ ಆರೈಕೆ ಸೇವೆ ಒದಗಿಸುವ ಉದ್ದೇಶದಿಂದ ಜುಲೈ 15ರಂದು ಅಬ್ಬಿಗೇರಿಯಲ್ಲಿ ಉಚಿತ ನೇತ್ರ ತಪಾಸಣೆ ಹಾಗೂ ಶಸ್ತ್ರಚಿಕಿತ್ಸಾ ಶಿಬಿರ ಆಯೋಜಿಸಲಾಗಿದೆ.

ಹುಬ್ಬಳ್ಳಿಯ ಜಯಪ್ರಿಯ ಫೌಂಡೇಶನ್, ನವಜ್ಯೋತಿ ಗ್ರಾಮೀಣಾಭಿವೃದ್ಧಿ ವಿವಿಧೋದ್ದೇಶ ಹಾಗೂ ಶಿಕ್ಷಣ ಸೇವಾ ಸಂಸ್ಥೆ (ರಿ), ಅಬ್ಬಿಗೇರಿ, ಕರ್ನಾಟಕ ರಾಜ್ಯ ರೈತ ಸಂಘ (ರೋಣ ಮತ್ತು ಅಬ್ಬಿಗೇರಿ ಘಟಕ) ಹಾಗೂ ಗದಗ ಜಿಲ್ಲಾ ಕಟ್ಟಡ ಕಾರ್ಮಿಕ ಸಂಘಗಳ ಸಂಯುಕ್ತ ಆಶ್ರಯದಲ್ಲಿ ಶಿಬಿರ ಹಮ್ಮಿಕೊಳ್ಳಲಾಗಿದೆ.

ಅಬ್ಬಿಗೇರಿಯ ಶ್ರೀ ಅನ್ನದಾನೇಶ್ವರ ಮಠದಲ್ಲಿ ಬೆಳಿಗ್ಗೆ 10ರಿಂದ ಮಧ್ಯಾಹ್ನ 2.30ರವರೆಗೆ ನಡೆಯುವ ಶಿಬಿರದಲ್ಲಿ ಕಣ್ಣಿನ ತಪಾಸಣೆ, ದೃಷ್ಟಿದೋಷ ಪರೀಕ್ಷೆ, ನೇತ್ರ ಆರೋಗ್ಯ ಸಲಹೆ, ವಿವಿಧ ಕಣ್ಣಿನ ಕಾಯಿಲೆಗಳ ಪರೀಕ್ಷೆ ಹಾಗೂ ಶಸ್ತ್ರಚಿಕಿತ್ಸೆ ಅಗತ್ಯವಿರುವ ರೋಗಿಗಳ ಆಯ್ಕೆ ಪ್ರಕ್ರಿಯೆಯನ್ನು ಉಚಿತವಾಗಿ ನಡೆಸಲಾಗುತ್ತದೆ.

ಗ್ರಾಮೀಣ ಭಾಗದ ಜನರು, ಹಿರಿಯ ನಾಗರಿಕರು ಹಾಗೂ ಕಣ್ಣಿನ ಸಮಸ್ಯೆಯಿಂದ ಬಳಲುತ್ತಿರುವವರು ಈ ಶಿಬಿರದ ಸದುಪಯೋಗ ಪಡೆದುಕೊಳ್ಳುವಂತೆ ಸಂಘಟಕರು ಮನವಿ ಮಾಡಿದ್ದಾರೆ.

ಈ ಸಂದರ್ಭದಲ್ಲಿ ಬಸವರಾಜ ಪಲ್ಲೇದ, ಬಸವರಾಜ ಹೊಸಮನಿ, ಈರಯ್ಯ ಅರಳಿಕಟ್ಟಿ, ಮುತ್ತಯ್ಯ ಬೆನಹಾಳ, ಮೈಲಾರಪ್ಪ ಚವಡಿ, ಹಂಪಣ್ಣ ಗುರಿಕಾರ, ಮಹಾದೇವಿ ಅಸೂಟಿ ಹಾಗೂ ವೀರೇಶ ಕಲಹಾಳ ಉಪಸ್ಥಿತರಿದ್ದರು.

# ಶಾ ಈಗ ನನ್ನ ಆತ್ಮೀಯ ಸ್ನೇಹಿತ: 6 ವರ್ಷದ ವೈರಲ್ ವಿಡಿಯೋಗೆ ಅನುಪಮ್ ಖೇರ್ ತಿರುಗೇಟು

**ವಿಜಯಸಾಕ್ಷಿ ಸುದ್ದಿ, ಮುಂಬೈ**

ಬಾಲಿವುಡ್‌ನ ಇಬ್ಬರು ಹಿರಿಯ ನಟರಾದ ಅನುಪಮ್ ಖೇರ್ ಮತ್ತು ನಸೀರುದ್ದೀನ್ ಶಾ ನಡುವಿನ ಹಳೆಯ ರಾಜಕೀಯ ಭಿನ್ನಾಭಿಪ್ರಾಯ ಮತ್ತೆ ಸುದ್ದಿಯಾಗಿದ್ದು, ವೈರಲ್ ಆಗಿರುವ ಆರು ವರ್ಷದ ಹಳೆಯ ವಿಡಿಯೋ ಕುರಿತು ಅನುಪಮ್ ಖೇರ್ ತೀಕ್ಷ್ಣ ಪ್ರತಿಕ್ರಿಯೆ ನೀಡಿದ್ದಾರೆ. ತಮ್ಮ ವಿರುದ್ಧ ಉದ್ದೇಶಪೂರ್ವಕ ಅಭಿಯಾನ ನಡೆಯುತ್ತಿದೆ ಎಂದು ಆರೋಪಿಸಿರುವ ಅವರು, ನಸೀರುದ್ದೀನ್ ಶಾ ಈಗ ತಮ್ಮ ಆತ್ಮೀಯ ಸ್ನೇಹಿತರಾಗಿದ್ದಾರೆ ಎಂದು ಸ್ಪಷ್ಟಪಡಿಸಿದ್ದಾರೆ. ರಾಜಕೀಯ ಭಿನ್ನಾಭಿಪ್ರಾಯದ ಸಂದರ್ಭದಲ್ಲಿ ನಸೀರುದ್ದೀನ್ ಶಾ ಅನುಪಮ್ ಖೇರ್ ಅವರನ್ನು ಕೋಡಂಗಿಟಿ ಎಂದು ಕರೆದಿದ್ದ ವಿಡಿಯೋ ಮತ್ತೆ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ. ಈ ಕುರಿತು ಮಾತನಾಡಿದ ಅನುಪಮ್, ರಾಮ್ ಮಂದಿರ ದೇಣಿಗೆ ವಿವಾದದ ಬಗ್ಗೆ ತಮ್ಮ ಇತ್ತೀಚಿನ ಹೇಳಿಕೆಗಳಿಗೆ ಪ್ರತಿಕ್ರಿಯೆಯಾಗಿ ಕೆಲವರು ಹಳೆಯ ವಿಡಿಯೋವನ್ನು ಹುಡುಕಿ ವೈರಲ್ ಮಾಡಿದ್ದಾರೆ ಎಂದು ಕಿಡಿಕಾರಿದರು.

ಬೆಳೆ ವಿಮೆ ಗೊಂದಲ ನಿವಾರಣೆ, ಪಾವತಿ ಅವಧಿ ವಿಸ್ತರಣೆಗೆ ಆಗ್ರಹಿಸಿ ಡಿಸಿಗೆ ಮನವಿ

# ಬೆಳೆ ವಿಮೆ ಗೊಂದಲಕ್ಕೆ ಬೇಸತ್ತ ರೈತರು



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆ ಹಾಗೂ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಯ ಹೊಸ ನಿಯಮಗಳಿಂದ ರೈತರಲ್ಲಿ ಉಂಟಾಗಿರುವ ಗೊಂದಲ ನಿವಾರಿಸಿ, ಬೆಳೆ ವಿಮೆ ಕಂತು ಪಾವತಿಸಲು ಅವಧಿ ವಿಸ್ತರಿಸಬೇಕು ಎಂದು ಆಗ್ರಹಿಸಿ ಲಕ್ಷ್ಮೇಶ್ವರ ತಾಲೂಕು ಸಮಗ್ರ ರೈತ ಹೋರಾಟ ಸಂಘಟನೆಗಳ ಒಕ್ಕೂಟದ ವತಿಯಿಂದ ಸೋಮವಾರ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳು, ಜಂಟಿ ಕೃಷಿ ನಿರ್ದೇಶಕರು, ಲೀಡ್ ಬ್ಯಾಂಕ್ ವ್ಯವಸ್ಥಾಪಕರು ಹಾಗೂ ವಿವಿಧ ಬ್ಯಾಂಕ್‌ಗಳ ಪ್ರಾದೇಶಿಕ ವ್ಯವಸ್ಥಾಪಕರೊಂದಿಗೆ ರೈತರು ಸಭೆ ನಡೆಸಿ, ಬೆಳೆ ವಿಮೆ ಸಮಸ್ಯೆ, ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸುವುದು ಸೇರಿದಂತೆ ರೈತರು ಎದುರಿಸುತ್ತಿರುವ ವಿವಿಧ ಸಮಸ್ಯೆಗಳ ಕುರಿತು ಚರ್ಚಿಸಿದರು.

ಮನವಿಯಲ್ಲಿ, ಕಳೆದ ಹಲವು ವರ್ಷಗಳಿಂದ ರೈತರು ಬೆಳೆ ವಿಮೆ ಕಂತು ಪಾವತಿಸುತ್ತಿದ್ದರೂ ಸಮರ್ಪಕ ಪರಿಹಾರ ದೊರೆಯುತ್ತಿಲ್ಲ. ದಲ್ಲಾಳಿಗಳ ಹಾವಳಿಯಿಂದ ಬಹುತೇಕ ರೈತರು ವಂಚಿತರಾಗಿದ್ದು, ಕೆಲವೇ ರೈತರಿಗೆ ಅಲ್ಪ ಪ್ರಮಾಣದ ಪರಿಹಾರ ಸಿಕ್ಕಿದೆ ಎಂದು ಆರೋಪಿಸಲಾಗಿದೆ.

ಹೊಸ ನಿಯಮದಂತೆ ಬ್ಯಾಂಕ್‌ಗಳಲ್ಲಿ ಸಾಲ ಪಡೆದ ರೈತರು ಬೆಳೆ ಬದಲಾವಣೆ ದೃಢೀಕರಣ ಪತ್ರದೊಂದಿಗೆ ವಿಮೆ ಪಾವತಿಸಬೇಕಿದ್ದು, ಹತ್ತಿ ಹಾಗೂ ಹೆಸರು ಬೆಳೆಗಳಿಗೆ ಜುಲೈ 15 ಕೊನೆಯ ದಿನವಾಗಿರುವುದರಿಂದ ಅನೇಕ ರೈತರು ವಿಮೆ ಪಾವತಿಯಿಂದ ವಂಚಿತರಾಗುವ ಸಾಧ್ಯತೆ ಇದೆ ಎಂದು ತಿಳಿಸಿದರು.

ಸಾಲ ಪಡೆಯದ ರೈತರಿಗೆ ಸ್ವಘೋಷಣಾ ಪತ್ರದ ಮೂಲಕ ಕರ್ನಾಟಕ ಒನ್ ಹಾಗೂ ಸಿಎಸ್‌ಸಿ ಕೇಂದ್ರಗಳಲ್ಲಿ ವಿಮೆ ಪಾವತಿಸಲು ಅವಕಾಶ ನೀಡಲಾಗಿದ್ದರೂ, ಸರ್ವರ್ ಸಮಸ್ಯೆ, ತಾಂತ್ರಿಕ ತೊಂದರೆ, ದಾಖಲೆಗಳ ಗೊಂದಲ ಹಾಗೂ ಬ್ಯಾಂಕ್‌ಗಳಲ್ಲಿ ಕನ್ನಡ ಬಲ್ಲ ಸಿಬ್ಬಂದಿ ಕೊರತೆಯಿಂದ ರೈತರು ಪರದಾಡುವಂತಾಗಿದೆ ಎಂದು ದೂರಿದರು.

**ಬೆಳೆ ವಿಮೆ ನಿಯಮಗಳ ಗೊಂದಲ ನಿವಾರಿಸಿ, ಪಾವತಿ ಅವಧಿ ವಿಸ್ತರಿಸದಿದ್ದರೆ ಸಾವಿರಾರು ರೈತರು ವಿಮೆ ಸೌಲಭ್ಯದಿಂದ ವಂಚಿತರಾಗಲಿದ್ದಾರೆ.**

**- ಮಂಜುನಾಥ ಮಾಗಡಿ,** ತಾಲೂಕು ಅಧ್ಯಕ್ಷ,
ಸಮಗ್ರ ರೈತ ಹೋರಾಟ ಸಂಘಟನೆಗಳ ಒಕ್ಕೂಟ

ಅಲ್ಲದೆ, ಅತಿವೃಷ್ಟಿ, ಮಳೆ ಕೊರತೆ ಹಾಗೂ ರೋಗಬಾಧೆಯಿಂದ ಸಂಕಷ್ಟದಲ್ಲಿರುವ ರೈತರಿಗೆ ಬೆಳೆ ವಿಮೆ ಪಾವತಿಸಲು ಅವಕಾಶ ಕಲ್ಪಿಸಬೇಕು. ವಿಮೆ ಪಾವತಿಗೆ ಇನ್ನಷ್ಟು ಕಾಲಾವಕಾಶ ನೀಡುವ ಜೊತೆಗೆ ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿ ಪರಿಹಾರ ಒದಗಿಸಬೇಕು ಎಂದು ಒತ್ತಾಯಿಸಿದರು. ಸೋಮವಾರ ಬ್ಯಾಂಕ್‌ಗಳು ಹಾಗೂ ಆನ್‌ಲೈನ್ ಕೇಂದ್ರಗಳ ಮುಂದೆ ರೈತರು ದಿನವಿಡೀ ಕಾದರೂ, ಸರ್ವರ್ ಸಮಸ್ಯೆಯಿಂದ ವಿಮೆ ಪಾವತಿಸಲು ಸಾಧ್ಯವಾಗದೆ ನಿರಾಶರಾಗಿ ಹಿಂತಿರುಗಿದ ದೃಶ್ಯಗಳು ಕಂಡುಬಂದವು.

ರಾಜ್ಯಪಾಲರಿಂದ ರಾಜ್ಯ ಪುರಸ್ಕಾರ ಸ್ವೀಕಾರ | ಸ್ಕೌಟ್ಸ್‌ಗೈಡ್ಸ್ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳ ಸಾಧನೆ

# ರಾಜ್ಯ ಮಟ್ಟದಲ್ಲಿ ಮಿಂಚಿದ ಶಿಗ್ಲಿ ಶಾಲೆ ವಿದ್ಯಾರ್ಥಿಗಳು



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಿನ ಶಿಗ್ಲಿ ಗ್ರಾಮದ ಎಸ್.ಎಸ್. ಕೂಡ್ಲಮಠ ಮಾಧ್ಯಮಿಕ ಶಾಲೆಯ 20 ಸ್ಕೌಟ್ಸ್ ಹಾಗೂ 6 ಗೈಡ್ಸ್ ವಿದ್ಯಾರ್ಥಿಗಳು ಭಾರತ ಸ್ಕೌಟ್ಸ್ ಮತ್ತು ಗೈಡ್ಸ್‌ನ ರಾಜ್ಯ ಪುರಸ್ಕಾರ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಬೆಂಗಳೂರಿನ ಲೋಕಭವನದಲ್ಲಿ ನಡೆದ ಸಮಾರಂಭದಲ್ಲಿ ರಾಜ್ಯಪಾಲರಿಂದ ರಾಜ್ಯ ಪುರಸ್ಕಾರ ಪ್ರಶಸ್ತಿ ಸ್ವೀಕರಿಸಿದರು.

ಶನಿವಾರ ನಡೆದ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಶಾಲೆಯ ವಿದ್ಯಾರ್ಥಿಗಳು ರಾಜ್ಯಮಟ್ಟದಲ್ಲಿ ಸಾಧನೆ ಮೆರೆದಿದ್ದು, ತರಬೇತುದಾರ ಶಿಕ್ಷಕರಾದ ಕೆ.ಆರ್. ಲಮಾಣಿ ಹಾಗೂ ಪಿ.ಸಿ. ಹಿರೇಮಠ ಅವರ ವಿಶೇಷ ತರಬೇತಿ ಈ ಯಶಸ್ಸಿಗೆ ಕಾರಣವಾಗಿದೆ.

ಗದಗ ಜಿಲ್ಲೆಯ ಪ್ರತಿನಿಧಿಯಾಗಿ ಶಾಲೆಯ ವಿದ್ಯಾರ್ಥಿ ಮಲ್ಲಿಕಾರ್ಜುನ ಕಾಳಪ್ಪನವರ ರಾಜ್ಯಪಾಲರಿಂದ ಪ್ರಶಸ್ತಿ ಸ್ವೀಕರಿಸಿದರು. ತರಬೇತಿ ನೀಡಿದ ಶಿಕ್ಷಕರಾದ ಕೆ.ಆರ್. ಲಮಾಣಿ ಮತ್ತು ಪಿ.ಸಿ. ಹಿರೇಮಠ ಅವರೂ ವಿದ್ಯಾರ್ಥಿಗಳೊಂದಿಗೆ ಸಮಾರಂಭದಲ್ಲಿ ಭಾಗವಹಿಸಿ ಗೌರವ ಸ್ವೀಕರಿಸಿದರು.

ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಅಧ್ಯಕ್ಷ ಎಸ್.ಪಿ. ಬಳಿಗಾರ, ಕಾರ್ಯದರ್ಶಿ ಸಿ.ಎಂ. ರಾಗಿ, ಮುಖ್ಯೋಪಾಧ್ಯಾಯ ಸಿ.ಬಿ. ಮೊಗಲಿ, ಶಿಕ್ಷಕ ವೃಂದ, ಆಡಳಿತ ಮಂಡಳಿ, ಹಳೆಯ ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರು ಅಭಿನಂದನೆ ಸಲ್ಲಿಸಿದ್ದಾರೆ.

# ಇಂದು ಸ್ವಾತಂತ್ರ್ಯದ ಓಟ ನಾಟಕ ಪ್ರದರ್ಶನ




**ವಿಜಯಸಾಕ್ಷಿ ಸುದ್ದಿ, ಗದಗ**

ಲಿಂಗಾಯತ ಪ್ರಗತಿಶೀಲ ಸಂಘ ಗದಗ-ಬೆಟಗೇರಿ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ತೋಂಟದಾರ್ಯ ಕಲಾರಂಗ, ನಟರಂಗ ಸಾಂಸ್ಕೃತಿಕ ಅಕಾಡೆಮಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಶಿವಮೊಗ್ಗ ರಂಗಾಯಣದ ಸಂಯುಕ್ತ ಆಶ್ರಯದಲ್ಲಿ ಟಿಸ್ವಾತಂತ್ರ್ಯದ ಓಟಟಿ ನಾಟಕವನ್ನು ಜುಲೈ 15ರಂದು ಸಂಜೆ 6 ಗಂಟೆಗೆ ನಗರದ ಜಗದ್ಗುರು ತೋಂಟದಾರ್ಯ ಕಲ್ಯಾಣ ಮಂಟಪದಲ್ಲಿ ಪ್ರದರ್ಶಿಸಲಾಗುವುದು.

ಖ್ಯಾತ ಸಾಹಿತಿ ಬೊಳುವಾರು ಮಹಮದ್ ಕುಂಞ ಅವರ ಕಾದಂಬರಿಯನ್ನು ಆಧರಿಸಿದ ಈ ನಾಟಕಕ್ಕೆ ನಟರಾಜ ಹೊನ್ನವಳ್ಳಿ ರಂಗಪಠ್ಯ, ವಿನ್ಯಾಸ ಹಾಗೂ ನಿರ್ದೇಶನ ನೀಡಿದ್ದು, ಮಂಜುನಾಥ ಗೋಮಾರದಹಳ್ಳಿ ನಾಟಕ ರೂಪಾಂತರ, ಸಲ್ಮಾ ದಂಡಿನ ಸಹ ನಿರ್ದೇಶನ ಹಾಗೂ ರಾಘವ ಕಮ್ಮಾರ ಸಂಗೀತ ಸಂಯೋಜನೆ ಮಾಡಿದ್ದಾರೆ. ಕಾರ್ಯಕ್ರಮವನ್ನು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಉದ್ಘಾಟಿಸಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ರಂಗಾಸಕ್ತರು ಭಾಗವಹಿಸಿ ನಾಟಕ ವೀಕ್ಷಿಸುವಂತೆ ಡಾ. ಜಿ.ಬಿ. ಪಾಟೀಲ, ಡಾ. ಉಮೇಶ ಪುರದ, ವಿವೇಕಾನಂದಗೌಡ ಪಾಟೀಲ ಹಾಗೂ ಸೋಮಶೇಖರ ಚಿಕ್ಕಮಠ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

ಒಂಟಿ ಮಹಿಳೆಯರ ಜಿಲ್ಲಾ ಸಮಾವೇಶದಲ್ಲಿ ಸರ್ಕಾರಗಳಿಗೆ ಆರ್.ಎಸ್. ಬಸವರಾಜ್ ಆಗ್ರಹ

# ಮಹಿಳೆಯರ ಶೋಷಣೆಗೆ ಅಂತ್ಯ ಹಾಡಬೇಕಿದೆ




**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಶತಶತಮಾನಗಳಿಂದ ಮಹಿಳೆಯರನ್ನು ಶೋಷಿಸುತ್ತಿರುವ ಮನೋಭಾವ ಮತ್ತು ವ್ಯವಸ್ಥೆಯನ್ನು ನಿರ್ಮೂಲನೆ ಮಾಡಬೇಕಿದ್ದು, ಮಹಿಳೆಯರಿಗೆ ಸಮಾನ ಹಕ್ಕು ಹಾಗೂ ಗೌರವ ದೊರೆಯುವಂತೆ ಸರ್ಕಾರಗಳು ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು ಎಂದು ರಾಜ್ಯ ಒಂಟಿ ಮಹಿಳಾ ಸಂರಕ್ಷಣಾ ಸಂಘದ ಗೌರವಾಧ್ಯಕ್ಷ ಆರ್.ಎಸ್. ಬಸವರಾಜ್ ಹೇಳಿದರು.

ಪಟ್ಟಣದಲ್ಲಿ ನಡೆದ ಜಿಲ್ಲಾ ಒಂಟಿ ಮಹಿಳೆಯರ ಸಂಘದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಆದಿ ಕಾಲದಿಂದಲೂ ಪುರುಷ ಪ್ರಧಾನ ಸಮಾಜ ಮಹಿಳೆಯನ್ನು ಶೋಷಿತ ವಸ್ತುವಾಗಿ ಬಳಸಿಕೊಂಡು ಬಂದಿದೆ.

ಆಸ್ತಿ ಹಕ್ಕು ಸೇರಿದಂತೆ ಹಲವು ಮೂಲಭೂತ ಹಕ್ಕುಗಳಿಂದ ಮಹಿಳೆಯರನ್ನು ವಂಚಿಸಲಾಗಿದೆ ಎಂದು ಆರೋಪಿಸಿದರು.

**ಪುರುಷ ಪ್ರಧಾನ ಮನೋಭಾವ ಬದಲಾಗದ ಹೊರತು ಮಹಿಳೆಯರಿಗೆ ನೈಜ ಸಾಮಾಜಿಕ ನ್ಯಾಯ ದೊರೆಯುವುದಿಲ್ಲ.**

**- ಆರ್.ಎಸ್. ಬಸವರಾಜ್,** ಗೌರವಾಧ್ಯಕ್ಷ,
ರಾಜ್ಯ ಒಂಟಿ ಮಹಿಳಾ ಸಂರಕ್ಷಣಾ ಸಂಘ

ಜಗಜ್ಯೋತಿ ಬಸವೇಶ್ವರ, ಮಹಾತ್ಮ ಜ್ಯೋತಿರಾವ್ ಫುಲೆ, ಸಾವಿತ್ರಿಬಾಯಿ ಫುಲೆ ಸೇರಿದಂತೆ ಅನೇಕ ಸಮಾಜ ಸುಧಾರಕರು ಮಹಿಳಾ ಹಕ್ಕುಗಳಿಗಾಗಿ ಹೋರಾಟ ನಡೆಸಿದ್ದರೂ, ಇಂದಿಗೂ ಮಹಿಳೆಯರ ಮೇಲಿನ ಶೋಷಣೆ ಸಂಪೂರ್ಣವಾಗಿ ನಿಂತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು. ಮಹಿಳೆಯರಿಗೆ ಆಹಾರ, ಬಟ್ಟೆ, ವಸತಿ, ಕುಡಿಯುವ ನೀರು, ಶಿಕ್ಷಣ ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ಖಾತ್ರಿಪಡಿಸಬೇಕು. ಸಂಸತ್ತು ಹಾಗೂ ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಬೇಕು ಎಂದು ಅವರು ಒತ್ತಾಯಿಸಿದರು.

ರಾಜ್ಯ ಸಂಚಾಲಕಿ ಪಿ. ಮಾಳಮ್ಮ ಮಾತನಾಡಿ, ಒಂಟಿ ಮಹಿಳೆಯರ ಸಾಮಾಜಿಕ ಮತ್ತು ಆರ್ಥಿಕ ಭದ್ರತೆಗೆ ಸರ್ಕಾರಗಳು ವಿಶೇಷ ಯೋಜನೆಗಳನ್ನು ಜಾರಿಗೊಳಿಸಬೇಕು ಎಂದು ಆಗ್ರಹಿಸಿದರು. ಕಾರ್ಯಕ್ರಮದಲ್ಲಿ ಸಿಐಟಿಯು ಉಪಾಧ್ಯಕ್ಷ ಜಗನ್ನಾಥ, ಕಾರ್ಯಕ್ರಮದ ಅಧ್ಯಕ್ಷೆ ಗುರುಶಾಂತಮ್ಮ, ಚಂದ್ವಿ, ರಾಮಕ್ಕ, ಮಂಜಮ್ಮ, ಭಾಗ್ಯಮ್ಮ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ರೈತರ ಕೃಷಿ ಸಾಲ ಮನ್ನಾ ಮಾಡಲು ಆಗ್ರಹ



**ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಕೃತಿ ವಿಕೋಪಗಳ ನಿರಂತರ ಹೊಡೆತದಿಂದ ರೈತರ ಬದುಕು ಸಂಕಷ್ಟಕ್ಕೆ ಸಿಲುಕಿದ್ದು, ರಾಜ್ಯ ಹಾಗೂ ಕೇಂದ್ರ ಸರ್ಕಾರಗಳು ರೈತರ ಕೃಷಿ ಸಾಲವನ್ನು ಕೂಡಲೇ ಮನ್ನಾ ಮಾಡಬೇಕು ಎಂದು ಜನಪದ ಕಲಾವಿದ ಗವಿಶಿದ್ಧಯ್ಯ ಜಿ. ಹಳ್ಳಿಕೇರಿಮಠ ಆಗ್ರಹಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಮಳೆ ಬಂದರೆ ಬೆಳೆಗಳಿಗೆ ಸೂಕ್ತ ಬೆಲೆ ಸಿಗುವುದಿಲ್ಲ. ಈ ವರ್ಷ ಮಳೆಯ ಕೊರತೆಯಿಂದ ಬೆಳೆಗಳು ಒಣಗುತ್ತಿದ್ದು, ರೈತರು ಕುಟುಂಬ ನಿರ್ವಹಣೆಯೂ ಕಷ್ಟಕರವಾಗಿದೆ. ನಿರಂತರ ಸಂಕಷ್ಟದಲ್ಲಿ ಸಿಲುಕಿರುವ ರೈತರ ಪರಿಸ್ಥಿತಿ ಅತ್ಯಂತ ದಯನೀಯವಾಗಿದೆ ಎಂದು ತಿಳಿಸಿದ್ದಾರೆ.

ರೈತರು ತಮ್ಮ ಸಮಸ್ಯೆಗಳ ಪರಿಹಾರಕ್ಕಾಗಿ ವಿವಿಧ ರೀತಿಯ ಪ್ರತಿಭಟನೆಗಳನ್ನು ನಡೆಸುತ್ತಿದ್ದರೂ, ಸರ್ಕಾರಗಳು ಮನವಿಗಳಿಗೆ ಸಮರ್ಪಕವಾಗಿ ಸ್ಪಂದಿಸುತ್ತಿಲ್ಲ. ಬ್ಯಾಂಕುಗಳು ಹಾಗೂ ಸಹಕಾರ ಸಂಘಗಳಿಂದ ಪಡೆದ ಕೃಷಿ ಸಾಲದ ಹೊರೆ ರೈತರನ್ನು ಮತ್ತಷ್ಟು ಸಂಕಷ್ಟಕ್ಕೆ ತಳ್ಳಿದೆ ಎಂದು ಅವರು ಹೇಳಿದ್ದಾರೆ.

ರೈತರೇ ದೇಶದ ಅನ್ನದಾತರು. ನೆರೆ, ಬರ ಸೇರಿದಂತೆ ಪ್ರಕೃತಿ ವಿಕೋಪಗಳು ಎದುರಾದಾಗ ರೈತರ ಜೀವನ ಭದ್ರತೆಗೆ ಶಾಶ್ವತ ಯೋಜನೆಗಳನ್ನು ಸರ್ಕಾರ ಜಾರಿಗೆ ತರಬೇಕು. ರೈತ ಉಳಿದರೆ ಮಾತ್ರ ದೇಶ ಉಳಿಯುತ್ತದೆ ಎಂಬುದನ್ನು ಸರ್ಕಾರಗಳು ಮನಗಾಣಬೇಕು ಎಂದು ಒತ್ತಾಯಿಸಿದ್ದಾರೆ.

ಜೀವನ ಮೌಲ್ಯಗಳ ದತ್ತಿ ಉಪನ್ಯಾಸದಲ್ಲಿ ಸಂಶಿಮಠ ಅಭಿಮತ

# ಪರಿಶ್ರಮದಿಂದಲೇ ಸಮಾಜದ ಗೌರವ ಗಳಿಸಲು ಸಾಧ್ಯ




**ವಿಜಯಸಾಕ್ಷಿ ಸುದ್ದಿ, ಗದಗ**

ವ್ಯಕ್ತಿಯು ತನ್ನ ಕಾರ್ಯಕ್ಷೇತ್ರದಲ್ಲಿ ಪ್ರಾಮಾಣಿಕವಾಗಿ ಶ್ರಮಿಸಿದಾಗ ಮಾತ್ರ ಸಮಾಜ ಗೌರವಿಸುತ್ತದೆ. ಹಿರಿಯರ ಆದರ್ಶಮಯ ಬದುಕು ಎಲ್ಲರಿಗೂ ಪ್ರೇರಣೆಯಾಗಬೇಕು ಎಂದು ಗದಗ ಜಿಲ್ಲಾ ಹಾಗೂ ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆಯ ಮಾಜಿ ಅಧ್ಯಕ್ಷ ಸಿದ್ರಾಮಯ್ಯ ಸಂಶಿಮಠ ಹೇಳಿದರು.

ನಗರದ ವಾಣಿಜ್ಯ ಭವನದ ಬಸಪ್ಪ ಸಂಕಪ್ಪ ಸಂಕಣ್ಣವರ ಸಭಾಭವನದಲ್ಲಿ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ಹಾಗೂ ಲಿಂ. ಶ್ರೀ ಪಂಚಾಕ್ಷರಯ್ಯ ಎಸ್. ಸಂಶಿಮಠ ಅವರ ಸ್ಮರಣಾರ್ಥ ಆಯೋಜಿಸಿದ್ದ ಜೀವನ ಮೌಲ್ಯಗಳ ದತ್ತಿ ಉಪನ್ಯಾಸ ಮತ್ತು ಸಾಧಕರ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು.

**ಹಿರಿಯರ ಜೀವನ ಮೌಲ್ಯಗಳನ್ನು ಅಳವಡಿಸಿಕೊಂಡಾಗಲೇ ವ್ಯಕ್ತಿತ್ವ ವಿಕಸನ ಮತ್ತು ಸಮಾಜದ ಗೌರವ ಎರಡೂ ಲಭಿಸುತ್ತವೆ.**

**- ಸಿದ್ರಾಮಯ್ಯ ಸಂಶಿಮಠ,** ಮಾಜಿ ಅಧ್ಯಕ್ಷ,
ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ

ತಮ್ಮ ತಂದೆ ಪಂಚಾಕ್ಷರಯ್ಯ ಸಂಶಿಮಠ ಅವರ ಶ್ರಮ, ಜೀವನ ಮೌಲ್ಯಗಳು ಹಾಗೂ ಆದರ್ಶಗಳು ಇಂದಿಗೂ ದಾರಿದೀಪವಾಗಿವೆ. ಅವರ ಸ್ಮರಣಾರ್ಥ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದವರನ್ನು ಗುರುತಿಸಿ ಗೌರವಿಸುವ ಕಾರ್ಯ ತೃಪ್ತಿ ತಂದಿದೆ ಎಂದು ಹೇಳಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಸಂಪನ್ಮೂಲ ವ್ಯಕ್ತಿ ಕವಿತಾ ದಂಡಿನ, ಕಾರ್ಯಕ್ಷೇತ್ರದಲ್ಲಿ ಸಮೂಹವನ್ನು ಒಗ್ಗೂಡಿಸಿಕೊಂಡು ಕಾರ್ಯ ನಿರ್ವಹಿಸಿದಾಗ ಯಶಸ್ಸು ಸಾಧಿಸಲು ಸಾಧ್ಯ ಎಂದು ಹೇಳಿದರು. ಅಧ್ಯಕ್ಷತೆ ವಹಿಸಿದ್ದ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಗುಡಿಮನಿ, ಸಾಧನೆಗೆ ಪರಿಶ್ರಮವೇ ಮೂಲ ಬಂಡವಾಳವಾಗಿದ್ದು, ಪರಿಶ್ರಮದಿಂದಲೇ ವ್ಯಕ್ತಿಗೆ ಸಮಾಜದಲ್ಲಿ ಗೌರವ ದೊರೆಯುತ್ತದೆ ಎಂದು ಹೇಳಿದರು.

ಸಾನಿಧ್ಯ ವಹಿಸಿದ್ದ ಹಾಲಕೆರೆಯ ಶ್ರೀ ಅನ್ನದಾನೇಶ್ವರ ಸಂಸ್ಥಾನ ಮಠದ ಪೂಜ್ಯ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು, ಉತ್ತಮ ಜೀವನ ಮೌಲ್ಯಗಳನ್ನು ಅಳವಡಿಸಿಕೊಂಡು ಸಮಾಜಕ್ಕೆ ಮಾದರಿಯಾಗಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಗಣ್ಯರನ್ನು ಸನ್ಮಾನಿಸಲಾಯಿತು. ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಪದಾಧಿಕಾರಿಗಳು, ಸದಸ್ಯರು ಹಾಗೂ ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka